# ಹಂಪಿ ಟೈಮ್ಸ್

HAMPI TIMES

ಕನ್ನಡ ದಿನಪತ್ರಿಕೆ
KANNADA DAILY

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA








ಸಂಪುಟ:01 • ಸಂಚಿಕೆ:238 • ನೋಂದಣಿ ನಂ.:KARKAN27911 • ವಿಜಯನಗರ • 15.02.2024 • ಗುರುವಾರ • ಪುಟ:04 • ಬೆಲೆ:2
Volume:01 • Issue:238 • Reg.No:KARKAN27911 • VIJAYANAGARA • 15.02.2024 • Thursday • Page:04 • Rs:2







## ಮೈಕ್ರೋ ನ್ಯೂಸ್

### ಫೆ.16ಕ್ಕೆ ರಸ್ತೆ ಸುರಕ್ಷತಾ ಕಾಲ್ನಾಡಿಗೆ ಜಾಥಾ

**ಹಂಪಿ ಟೈಮ್ಸ್ ಹೊಸಪೇಟೆ**

ಸಾರಿಗೆ ಇಲಾಖೆಯ ವತಿಯಿಂದ 3 ಕಿ.ಮೀ ರಸ್ತೆ ಸುರಕ್ಷತೆ ಕಾಲ್ನಡಿಗೆ ಜಾಥವನ್ನು ಫೆಬ್ರುವರಿ 16ರಂದು ಹೊಸಪೇಟೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ರಸ್ತೆ ಸುರಕ್ಷತೆ ಕಾಲ್ನಡಿಗೆ ಜಾಥವು ಫೆ.16ರಂದು ಬೆಳಿಗ್ಗೆ ಹೊಸಪೇಟೆಯ ಪ್ರಾದೇಶಿಕ ಸಾರಿಗೆ ಅಧಿಕಾರಿ ಕಚೇರಿಯಿಂದ ಪ್ರಾರಂಭಗೊಂಡು, ನಗರದ ವಿವಿಧ ವೃತ್ತಗಳ ಮುಖಾಂತರ ಸಾಗಿ, ಜಿಲ್ಲಾ ಕ್ರಿಡಾಂಗಣದಲ್ಲಿ ಮುಕ್ತಯಗೊಳ್ಳುತ್ತದೆ. ಈ ಕಾರ್ಯಕ್ರಮದಲ್ಲಿ ಜಿಲ್ಲಾ ನ್ಯಾಯಾಧೀಶರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಸಾರಿಗೆ ಇಲಾಖೆಯ ಅಧಿಕಾರಿಗಳು, ಗಣ್ಯವ್ಯಕ್ತಿಗಳು, ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಸಾರಿಗೆ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಹೊಸಪೇಟೆಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ತಿಳಿಸಿದ್ದಾರೆ.

### ಈಶ್ವರ್‌ಗೆ ಬಿ.ಎಸ್ಸಿಯಲ್ಲಿ 5ನೇ ರ್‍ಯಾಂಕ್

**ಹಂಪಿ ಟೈಮ್ಸ್ ಹಗರಿಬೊಮ್ಮನಹಳ್ಳಿ**



ಪಟ್ಟಣದ ಜಿ.ವಿ.ಪಿ.ಪಿ. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿ ಯು. ಈಶ್ವರ್ ಬಿ.ಎಸ್ಸಿ ವಿಭಾಗದಲ್ಲಿ 2022–23 ನೇ ಶೈಕ್ಷಣಿಕ ಸಾಲಿನ ಪರೀಕ್ಷೆಯಲ್ಲಿ 5ನೇ ರ್‍ಯಾಂಕ್ ಪಡೆದಿದ್ದಾರೆ ಎಂದು ಕಾಲೇಜ್ ಪ್ರಾಂಶುಪಾಲರಾದ ಡಾ.ಕೆ.ವೆಂಕಟೇಶ್ ತಿಳಿಸಿದರು.

ಬಳ್ಳಾರಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದಿಂದ ನಡೆದ ಪದವಿ ಪರೀಕ್ಷೆಗಳ ವಿದ್ಯಾರ್ಥಿ ಉತ್ತಮ ಸಾಧನೆಗೈದಿದ್ದಾನೆ. ವಿದ್ಯಾರ್ಥಿಯ ಸಾಧನೆಗೆ ಕಾಲೇಜಿನ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿದ್ದಾರೆ.






# ಬರ ಮರೆಸಿದ ದುರ್ಗಾದೇವಿ ಜಾತ್ರಾಮಹೋತ್ಸವ

**ನಾಗೇನಹಳ್ಳಿ ಶ್ರೀ ದುರ್ಗಾದೇವಿಗೆ ವಿಶೇಷ ಪೂಜೆ । ದೇವಿ ದರ್ಶನ ಪಡೆದ ಶಾಸಕ ಎಚ್.ಆರ್.ಗವಿಯಪ್ಪ । ಜಾತ್ರೆಯಲ್ಲಿ ಜನಸಾಗರ**







**ಹಂಪಿ ಟೈಮ್ಸ್ ಹೊಸಪೇಟೆ**

ತಾಲೂಕಿನ ನಾಗೇನಹಳ್ಳಿಯಲ್ಲಿ ಐದು ವರ್ಷಕ್ಕೊಮ್ಮೆ ನಡೆಯುವ 3ನೇ ಶ್ರೀ ದುರ್ಗಾದೇವಿ ಜಾತ್ರಾಮಹೋತ್ಸವ ನಿಮಿತ್ತ ಗ್ರಾಮದ ಸಮಸ್ತ ಜನರು ದುರ್ಗಾದೇವಿಗೆ ಮಂಗಳವಾರ ಮತ್ತು ಬುಧವಾರ ಎರಡು ದಿನ ವಿಶೇಷ ಪೂಜೆ ಸಲ್ಲಿಸಿ ಅದ್ದೂರಿಯಾಗಿ ಸಂಭ್ರಮದಿಂದ ಆಚರಿಸಿದರು.

ಮಂಗಳವಾರ ಬೆಳಿಗ್ಗೆ ಇಷ್ಟಲಿಂಗ ಅಧ್ಯಯನ ಕೇಂದ್ರವತಿಯಿಂದ ಶ್ರೀ ದುರ್ಗಾದೇವಿ ದೇವಸ್ಥಾನ ಎದರು ಹಮ್ಮಿಕೊಂಡಿದ್ದ ಇಷ್ಟಲಿಂಗ ಪೂಜೆಯಲ್ಲಿ ಗ್ರಾಮಸ್ಥರು ಪಾಲ್ಗೊಂಡಿದ್ದರು. ಮೊದಲ ದಿನ ಸಸ್ಯಹಾರಿಗಳು ದೇವಿಗೆ ಹಣ್ಣು ಹೂ ಹೋಳಿಗೆ ನೈವೇದ್ಯ ಸಮರ್ಪಿಸಿ ಭಕ್ತಿ ಸೇವೆ ಸಲ್ಲಿಸಿದರು. ಮಂಗಳವಾರ ರಾತ್ರಿ ಶಕ್ತಿದೇವತೆ ಆರಾಧಕರು ರಾತ್ರಿಯಿಡಿ ಜಾಗರಣೆ ನಡೆಸಿ ಪೂಜೆ ಸಲ್ಲಿಸಿದರು.

ಬರಗಾಲವನ್ನೇ ನಾಚಿಸುವಂತೆ ಗ್ರಾಮದ ಮನೆ ಮನೆಯಲ್ಲೂ ಹಬ್ಬದ ವಾತವರಣ ಕಂಡುಬಂತು. ಪ್ರತಿ ಮನೆಯ ಮುಂದೆ, ಮಾಳಿಗೆ ಮೇಲೆ ಶ್ಯಾಮಿಯಾನಗಳು, ಲೈಟಿಂಗ್, ಬಾಳೆದಿಂಡುಗಳ, ಗ್ರಾಮದುದ್ದಕ್ಕೂ ರಸ್ತೆ ಅಕ್ಕಪಕ್ಕ ಬೃಹತ್ ಬ್ಯಾನರ್‌ಗಳು ರಾರಾಜಿಸಿದವು. ಗ್ರಾಮದ ಪ್ರತಿ ಮನೆಯಲ್ಲಿ ಜಾತ್ರೆಯ ಸವಿಯೂಟ ಸವಿಯಲು ಸಂಬಂಧಿಕರನ್ನು ಮತ್ತು ಆಪ್ತರನ್ನು ಗ್ರಾಮಸ್ಥರು ಆಹ್ವಾನಿಸಿದ್ದರಿಂದ ನಾಗೇನಹಳ್ಳಿ ಜನರಿಂದ ತುಂಬಿ ತುಳುಕಿತ್ತು. ಗ್ರಾಮದ ಆರಂಭದಲ್ಲೆ ವಾಹನಗಳ ನಿಲುಗಡೆಗೆ ಪೊಲೀಸರು ಸೂಚಿಸಿದ್ದರು. ಆದರೂ ಗ್ರಾಮದೊಳಗೆ ಟ್ರಾಫಿಕ್ ಜಾಮ್ ಆಗಿದ್ದರಿಂದ ಕೆಲ ಸಮಯ ಸಾರ್ವಜನಿಕರ ಸಂಚಾರ ಸುಗಮಗೊಳಿಸಲು ಪೊಲೀಸರು ಹರಸಾಹಸಪಟ್ಟರು.

ಶಾಸಕ ಎಚ್.ಆರ್.ಗವಿಯಪ್ಪ ದುರ್ಗಾದೇವಿಗೆ ಪೂಜೆ ಸಲ್ಲಿಸಿ ದರ್ಶನ ಪಡೆದರು. ಗ್ರಾಮ ಪಂಚಾಯಿತಿ ಅಧ್ಯಕ್ಷ ದುರುಗಪ್ಪ, ಮುಖಂಡರಾದ ಅಲ್ಲಾಭಕ್ತಿ, ಚಂದ್ರಶೇಖರ, ದೇವರಮನಿ ಬಸವರಾಜ, ಡಿ.ಚನ್ನಪ್ಪ, ಸೇರಿದಂತೆ ಗ್ರಾಮದ ಮುಖಂಡರು ಇದ್ದರು. ಜಾತ್ರೆ ನಿಮಿತ್ತ ತಾತ್ಕಾಲಿಕ ಆರೋಗ್ಯ ಕೇಂದ್ರ ತೆರೆಯಲಾಗಿತ್ತು. ಗ್ರಾಮಪಂಚಾಯಿತಿ ಅಧ್ಯಕ್ಷರು, ಸದಸ್ಯರು ಮತ್ತು ಸಿಬ್ಬಂದಿ ಬೀದಿ ದೀಪ, ಸ್ವಚ್ಛತೆ ಸೇರಿದಂತೆ ಮೂಲಭೂತ ಸೌಲಭ್ಯ ಕಲ್ಪಿಸಲು ಶ್ರಮಿಸಿದರು.

# ಮಕ್ಕಳ ರಕ್ಷಣೆ ಕಡೆಗಣಿಸಬೇಡಿ

**ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೊಸಂಬೆ ಹೇಳಿಕೆ । ಅಧಿಕಾರಿಗಳಿಗೆ ತಾಕೀತು**




**ಹಂಪಿ ಟೈಮ್ಸ್ ಹೊಸಪೇಟೆ**

ಮಕ್ಕಳ ಹಿತ ರಕ್ಷಣೆಗೆ ಇಲಾಖೆಗಳ ಅಧಿಕಾರಿಗಳು ಎಚ್ಚೆತ್ತುಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶಶಿಧರ ಕೊಸಂಬೆ ಅವರು ಹೇಳಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು ಹಾಗೂ ವಿಜಯನಗರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹೊಸಪೇಟೆ ತಾಲ್ಲೂಕು ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಮಕ್ಕಳ ಹಕ್ಕುಗಳ ವಿವಿಧ ಕಾಯ್ದೆಗಳ ಕುರಿತಾದ ಸಹಭಾಗೀದಾರರ ಎರಡು ದಿನದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ಹಕ್ಕುಗಳಿಗೆ ಸಂಬಂಧಿಸಿದಂತೆ ಹಲವಾರು ಕಾನೂನುಗಳು ಚಾರಿಯಾಗಿವೆ. ಬಾಲ್ಯವಿವಾಹ ನಿಷೇಧ ಕಾಯ್ದೆ ಚಾರಿಯಲ್ಲಿದ್ದರೂ ಸಹ ಬಾಲ್ಯವಿವಾಹಗಳು ಅಲ್ಲಲ್ಲಿ ನಡೆಯುತ್ತಲಿವೆ. ತಪ್ಪಿತಸ್ಥರ ವಿರುದ್ಧ ಕಠಿಣವಾದ ಶಿಕ್ಷೆಯಾಗಬೇಕು. ಈ ಹಿನ್ನೆಲೆಯಲ್ಲಿ ಸಮಾಜದ ಒಂದು ಜವಬ್ದಾರಿಯುತ ಸ್ಥಾನದಲ್ಲಿರುವ ನಾವುಗಳು ಮಕ್ಕಳಿಗೆ ನ್ಯಾಯ ಒದಗಿಸಬೇಕು. ಮಕ್ಕಳ ಹಕ್ಕುಗಳ ವಿಚಾರದಲ್ಲಿ ಎಲ್ಲೆ ಲೋಪದೋಷವಾದರು ಸಹ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗಕ್ಕೆ ಸ್ವಯಂಪ್ರೇರಿತರಾಗಿ ದೂರು ದಾಖಲಿಸಿ, ಸಂಬಂಧಪಟ್ಟ ಅಧಿಕಾರಿಗೆ ದೂರು ಹಾಗೂ ಮಾಹಿತಿ ನೀಡಬೇಕು ಎಂದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀಹರಿ ಬಾಬು, ಅಪರ ಜಿಲ್ಲಾಧಿಕಾರಿಗಳಾದ ಅನುರಾಧ ಜಿ., ಜಿಲ್ಲಾ ಪಂಚಾಯಿತಿಯ ಮುಖ್ಯ ಯೋಜನಾಧಿಕಾರಿಗಳಾದ ಅನುಧಾನ ಸ್ವಾಮಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಸುದಿಪ್ ಕುಮಾರ್ ಉಂಕಿ ಮತ್ತು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಮಾಜಿ ಸದಸ್ಯರಾದ ರಾಘವೇಂದ್ರ ಎಚ್.ಸಿ ಇವರು ಉಪಸ್ಥಿತರಿದ್ದರು.

ಕಾರ್ಯಾಗಾರದಲ್ಲಿ ಬಾಲ್ಯ ವಿವಾಹ ನಿಷೇಧ ಕಾಯ್ದೆ–2006, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆ–2012, ಬಾಲಾ ನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ–2015, ಆರ್.ಟಿ.ಸಿ.ಇ.ಕಾಯ್ದೆ–2009 ಹಾಗೂ ಮಕ್ಕಳ ರಕ್ಷಣಾ ನೀತಿ–2016ರ ಕುರಿತು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತ್, ತಾಲೂಕು ಪಂಚಾಯಿತ್ ಹಾಗೂ ಗ್ರಾಮ ಪಂಚಾಯಿತ್ ಮಟ್ಟದ ಅಧಿಕಾರಿಗಳಿಗೆ ಹೆಚ್ಚಿನ ವಿಷಯಗಳ ಬಗ್ಗೆ ವಿವರವಾಗಿ ತರಬೇತಿ ನೀಡಲಾಯಿತು.

# ಯೋಧರನ್ನು ಸನ್ಮಾನಿಸಿದ ಆನೇಕಲ್ ಗ್ರಾಮಸ್ಥರು



**ಹಂಪಿ ಟೈಮ್ಸ್ ಹಗರಿಬೊಮ್ಮನಹಳ್ಳಿ**

ತಾಲೂಕಿನ ಆನೇಕಲ್ಲು ಗ್ರಾಮದಲ್ಲಿ ಸುಡುಗಾಡು ನಡೆದ ಸಿದ್ಧರ ಕಾಲೂನಿಯಲ್ಲಿ ನಡೆದ ಶ್ರೀಮಾಯಮ್ಮ ದೇವಿ ಜಾತ್ರೆಯಲ್ಲಿ, ವೀರಯೋಧ ಕೆ.ಮಾರುತಿಗೆ ಸನ್ಮಾನ ಜರುಗಿತು.

ಸುಡುಗಾಡು ಸಿದ್ದರ ಸಮಾಜದವರು ಮತ್ತು ವಿನಾಯಕ ಗೆಳೆಯರ ಬಳಗದವರು ಹಾಗೂ ಗ್ರಾಮಸ್ಥರು ಸೇರಿ ಕೊಪ್ಪಳ ತಾಲೂಕಿನ ಹುಲಿಗಿ ಗ್ರಾಮದ ವೀರಯೋಧ ಕೆ.ಮಾರುತಿ ನಿವೃತ್ತಿಯಾಗಿ ಗ್ರಾಮಕ್ಕೆ ಮರಳಿದ ಹಿನ್ನೆಲೆಯಲ್ಲಿ, ಯುವಕರು ಸನ್ಮಾನಿಸಿ ಗೌರವಿಸಿದರು. ಪ್ರಾ.ಕೃ.ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಲಿಂಗರಾಜು ಮಾತನಾಡಿದರು. ಈ ವೇಳೆ ಅಲೆಮಾರಿ ಸಮುದಾಯದ ತಾಲೂಕು ಅಧ್ಯಕ್ಷ ಎಸ್.ಬಿ.ಮಂಜುನಾಥ ಮಾತನಾಡಿ 36ವರ್ಷಗಳ ಕಾಲ ದೇಶ ಸೇವೆಗೈದು ಈಗ ನಿವೃತ್ತಿಯಾಗಿ ಗ್ರಾಮಕ್ಕೆ ಮರಳಿರುವುದು ನಮ್ಮೆಲ್ಲರ ಹರ್ಷ, ಇವರಿಗೆ ಆನೇಕಲ್ ಗ್ರಾಮದಿಂದ ಸನ್ಮಾನಿಸುತ್ತಿರುವುದು ನಮಗೂ ಸಂತೋಷವಾಗಿದೆ ಎಂದರು. ಗ್ರಾ.ಪಂ.ಸದಸ್ಯ ಕಿನ್ನೂರಿ ಬಸವರಾಜ್, ಸದಸ್ಯ ಅಜ್ಜಪ್ಪ, ಹಂಪಾಪಟ್ಟಣ ಪ್ರಾ.ಕೃ.ಪ.ಸ.ಸಂಘ ಅಧ್ಯಕ್ಷ ಮಹೇಶ್, ನಾಗರಾಜ್, ಹುಲಿಗಿ ಉಮೇಶ್, ಗಂಟಿ ಕೊಟ್ರಪ್ಪ, ಮುಖ್ಯ ಶಿಕ್ಷಕ ಮಹೇಶಪ್ಪ, ಹೊಸಕೆರೆ ಪಕ್ಕೀರಪ್ಪ, ಅಂಜಿನಪ್ಪ, ಎಚ್. ದುರುಗಪ್ಪ ಇತರರಿದ್ದರು.

# ಪ್ರಜಾಪ್ರಭುತ್ವದ ತಳಹದಿ ಚುನಾವಣೆ

**ಹಂಪಿ ಟೈಮ್ಸ್ ಹೊಸಪೇಟೆ**

ಪ್ರಜಾಪ್ರಭುತ್ವದ ಸೌಂದರ್ಯ ಎಂದರೆ ಅದು ಚುನಾವಣೆ ಪ್ರಕ್ರಿಯೆಯಾಗಿದ್ದು, ಸಂವಿಧಾನ ನೀಡಿರುವ ಚುನಾವಣ ಹಕ್ಕನ್ನು ಸರಿಯಾದ ರೀತಿಯಲ್ಲಿ ಉಪಯೋಗಿಸಿ ಅರ್ಹ ಅಭ್ಯರ್ಥಿಯನ್ನು ಆಯ್ಕೆ ಮಾಡುವುದು ನಮ್ಮ ಕರ್ತವ್ಯವಾಗಿದೆ ಎಂದು ವಿಜಯನಗರ ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿ ಅನ್ನದಾನೇಶ್ವರ ಸ್ವಾಮಿ ತಿಳಿಸಿದರು.




ಕನ್ನಡ ವಿಶ್ವವಿದ್ಯಾಲಯದ ಮಂಟಪ ಸಭಾಂಗಣದಲ್ಲಿ ಒನಕೆ ಓಬವ್ವ ಅಧ್ಯಯನ ಪೀಠ, ಅಭಿವೃದ್ಧಿ ಅಧ್ಯಯನ ವಿಭಾಗ ಹಾಗೂ ರಾಷ್ಟ್ರೀಯ ಸೇವಾ ಯೋಜನಾ ಘಟಕ ವತಿಯಿಂದ ಆಯೋಜಿಸಿದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 18 ವರ್ಷ ಮೇಲ್ಪಟ್ಟ ಎಲ್ಲಾ ಯುವ ಜನತೆ ಹತ್ತಿರದ ಮತದಾರರ ನೋಂದಣಿ ಕೇಂದ್ರಗಳಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು ಕಡ್ಡಾಯವಾಗಿ ಮತ ಚಲಾಯಿಸುವುದು ನಮ್ಮೆಲ್ಲರ ಜವಾಬ್ದಾರಿ. ಇನ್ನೂ ಅಕ್ಷರಸ್ಥರು ಮತದಾನ ಪ್ರಕ್ರಿಯೆಯಿಂದ ದೂರ ಉಳಿಯುತ್ತಿರುವುದು ನೋವಿನ ಸಂಗತಿ. ತಾಲ್ಲೂಕು ಹಾಗೂ ಗ್ರಾಮೀಣ ಮಟ್ಟದಲ್ಲಿ ಮತದಾನದ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತ ಬಂದಿದೆ. ಯಾವುದೇ ಅಕ್ರಮಗಳಿಲ್ಲದೆ ನಿರ್ಭಿತವಾಗಿ ಯಾವುದೇ ಆಸೆ–ಆಕಾಂಕ್ಷೆ ಬಲಿಯಾಗದೆ ಮತದಾನ ಮಾಡಬೇಕು ಎಂದರು.

ಕನ್ನಡ ವಿವಿ ಕುಲಪತಿ ಡಾ. ಡಿ.ವಿ. ಪರಮಶಿವಮೂರ್ತಿ ಅಧ್ಯಕ್ಷತೆವಹಿಸಿ ಮಾತನಾಡಿ, ಮತದಾನ ಎನ್ನುವುದು ದಾನವಲ್ಲ ಅದು ನಮ್ಮೆಲ್ಲರ ಹಕ್ಕು. ಹೀಗಾಗಿ ಯಾವುದೇ ಆಮಿಷಗಳಿಗೆ ಒಳಗಾಗದೆ ಪ್ರಜ್ಞಾಪೂರ್ವಕವಾಗಿ ಮತ ಚಲಾಯಿಸಬೇಕು ಎಂದರು.

ಅಧ್ಯಯನಾಂಗದ ನಿರ್ದೇಶಕ ಡಾ. ಅಮರೇಶ ಯತಗಲ್ ಮಾತನಾಡಿದರು. ಒನಕೆ ಓಬವ್ವ ಅಧ್ಯಯನ ಪೀಠದ ಸಂಚಾಲಕರು ಡಾ. ಎ. ಶ್ರೀಧರ ಪ್ರಾಸ್ತವಿಕವಾಗಿ ಮಾತನಾಡಿದರು. ಕರ್ನಾಟಕ ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಬಸವರಾಜ ಹನುಮಂತಪ್ಪ ಗುಜಲರ್, ವಿವಿಧ ನಿಕಾಯದ ಡೀನರು, ಮುಖ್ಯಸ್ಥರು, ಪ್ರಾಧ್ಯಾಪಕರು, ಬೋಧಕ, ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.




## ವಚನ ಅರಿವು

### ಹೆಸರಿಲ್ಲದವನು

**ಅಸುರ ಮಾಲೆಗಳಿಲ್ಲ, ತ್ರಿಶೂಲ ಡಮರುಗವಿಲ್ಲ,**
**ಬ್ರಹ್ಮಕಪಾಲವಿಲ್ಲ, ಭಸ್ಮಭೂಷಣನಲ್ಲ,**
**ವೃಷಭವಾಹನನಲ್ಲ, ಋಷಿಯರುಗಳೊಡನಿದ್ದಾತನಲ್ಲ.**
**ಎಸಗುವ ಸಂಸಾರದ ಕುರುಹಿಲ್ಲದಾತಂಗೆ**
**ಹೆಸರಾವುದಿಲ್ಲೆಂದನಂಬಿಗರ ಚೌಡಯ್ಯ.**
**– ಅಂಬಿಗರ ಚೌಡಯ್ಯ**

ಶಿವ ಎಂದ ತಕ್ಷಣವೇ ಮನುಷ್ಯಾಕಾರದ ಚಿತ್ರ ಕಣ್ಣಮುಂದೆ ಬರುತ್ತದೆ. ಶೈವ ಪರಾಣಗಳಲ್ಲಿ ಶಿವನನ್ನು ಹೀಗೆ ಚಿತ್ರಿಸಿದ್ದಾರೆ. ಆದರೆ ಶರಣರು ಹೇಳುವ ಶಿವ ಅರಿವಿನ ಕುರುವು, ಇಡೀ ಬ್ರಹ್ಮಾಂಡದ ರೂಪ, ಸಕಲ ಜೀವಚೈತನ್ಯವಾಗಿದೆ. ಪುರಾಣಗಳಲ್ಲಿ ಹೇಳಿದಂತೆ ಶಿವ ರಾಕ್ಷಸರ ರುಂಡಮಾಲೆಗಳನ್ನು ಕೊರಳಲ್ಲಿ ಹಾಕಿಕೊಂಡವನಲ್ಲ. ಕೈಯಲ್ಲಿ ತ್ರಿಶೂಲ, ಡಮರುಗಗಳಿಲ್ಲ. ಬ್ರಹ್ಮನ ರುಂಡ ಕಡಿದು ಪಾತ್ರೆ ಮಾಡಿಕೊಂಡು ಕೈಯಲ್ಲಿ ಹಿಡಿದವನಲ್ಲ. ಮೈತುಂಬ ಭಸ್ಮ, ಬೂದಿಯನ್ನು ಬಳಿದುಕೊಂಡವನಲ್ಲ. ನಂದಿಯನ್ನು ವಾಹನ ಮಾಡಿಕೊಂಡು ಓಡಾಡುವವನಲ್ಲ. ಕೈಲಾಸದಲ್ಲಿ ಋಷಿಗಳ ಸಂಗದಲ್ಲಿದ್ದಾತನಲ್ಲ, ಹೆಂಡತಿ, ಮಕ್ಕಳು ಎಂಬ ಸಂಸಾರ ಹೊಂದಿರುವವನಲ್ಲ. ಹಾಗಾಗಿ ಶಿವ ಎಂದರೆ ನಿರಾಕಾರ, ನಿರ್ಗುಣ, ಚೈತನ್ಯಶಕ್ತಿ, ಪ್ರಕೃತಿ, ಬಯಲು, ಪ್ರೀತಿ, ಅರಿವು ಎಂಬುದಾಗಿದೆ. ಅವನಿಗೆ ಯಾವ ಹೆಸರು ಇಲ್ಲ ಎನ್ನುತ್ತಾನೆ ಅಂಬಿಗರ ಚೌಡಯ್ಯ.

(ಡಾ. ನಂದೀಶ್ವರ ದಂಡೆ ಅವರ ವಚನ ಜೀವನ ಮಾರ್ಗ ಪುಸ್ತಕದಿಂದ)

## ಫೆ.16, 17 ರಂದು ಎರಡು ದಿನಗಳ ಕಾರ್ಯಾಗಾರ

**ಹಂಪಿ ಟೈಮ್ಸ್ ಬಳ್ಳಾರಿ**

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಶಾಲಾ ಶಿಕ್ಷಣ, ಸಹಯೋಗದೊಂದಿಗೆ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ ಕಾಯ್ದೆ-2015, ಪೋಕ್ಸೊ ಕಾಯ್ದೆ-2012, ಬಾಲ್ಯವಿವಾಹ ನಿಷೇಧ ಕಾಯ್ದೆ-2006, ಆರ್.ಟಿ.ಐ ಕಾಯ್ದೆ-2009ರ ಕುರಿತು ಭಾಗೀದಾರ ಇಲಾಖೆಗಳ ಜಿಲ್ಲಾ, ತಾಲ್ಲೂಕು, ಗ್ರಾಮ ಮಟ್ಟದ ಅಧಿಕಾರಿಗಳಿಗೆ ಎರಡು ದಿನದ ಕಾರ್ಯಾಗಾರವನ್ನು ಫೆ.16 ಮತ್ತು 17ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಪಂಚಾಯತ್‌ನ ನಜೀರ್ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ಫೆ.16 ರಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶಶಿಧರ ಕೋಸಂಬೆ ಅವರು ಕಾರ್ಯಾಗಾರ ಉದ್ಘಾಟಿಸುವರು. ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ ಮಿಶ್ರಾ ಅವರು ಅಧ್ಯಕ್ಷತೆ ವಹಿಸುವರು.

ಹಿರಿಯ ಸಿವಿಲ್ ನ್ಯಾಯಧೀಶರಾದ ರಾಜೇಶ್ ಎನ್. ಹೊಸಮನೆ, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್.ಕೆ.ಹೆಚ್, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷ್ಮೀ ಮೈದೂರು, ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಾಣಾಧಿಕಾರಿ ಹಾಗೂ ಪ್ರಭಾರಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಾಮಕೃಷ್ಣ ನಾಯಕ. ಎಂ ಇವರು ಉಪಸ್ಥಿತರಿರುವರು. ಕೊಪ್ಪಳ ಯೂನಿಸೇಫ್ ಮಕ್ಕಳ ಸಂರಕ್ಷಣಾ ಯೋಜನೆಯ ಪ್ರಾದೇಶಿಕ ಸಂಯೋಜಕರಾದ ಡಾ.ಕೆ.ರಾಘವೇಂದ್ರ ಭಟ್, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಮಾಜಿ ಸದಸ್ಯರಾದ ರಾಘವೇಂದ್ರ.ಹೆಚ್.ಸಿ ಅವರು ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸುವರು ಎಂದು ತಿಳಿಸಿದೆ.

## ನೀವೂ ಬರೆಯಬಹುದು

ಹಂಪಿ ಟೈಮ್ಸ್ ಪತ್ರಿಕೆ ಆರಂಭಿಸಿದ್ದು ನಾವಾದರೂ, ಕೈಹಿಡಿದು ನಡೆಸುವವರು ನೀವು. ನಮ್ಮ ಇಚ್ಛೆಯೂ ಒಳಗೊಂಡಂತೆ ನಿಮ್ಮ ಆಶಯಗಳಿಗೆ ತಕ್ಕಂತೆ ಪತ್ರಿಕೆಯನ್ನು ರೂಪಿಸುವ ಹೊಣೆಗಾರಿಕೆ, ಜವಾಬ್ದಾರಿಯೂ ನಮ್ಮದಾಗಿದೆ. ಇಲ್ಲಿ ಕೇವಲ ನಮ್ಮ ಬರವಣಿಗೆ ಅಷ್ಟೇ ಅಲ್ಲದೇ, ಬರಹಗಾರರಾಗಿದ್ದರೆ ನೀವೂ ಕೂಡ ನಿಮ್ಮ ಬರಹವನ್ನಿಲ್ಲಿ ಓದಬಹುದು. ಈ ನಿಟ್ಟಿನಲ್ಲಿ ನಿಮ್ಮಿಂದ ಕತೆ, ಕವನ, ವಿವಿಧ ಪ್ರಕಾರದ ಸಾಹಿತ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಪರ ಚಿಂತನೆ ಒಳಗೊಂಡ ಲೇಖನಗಳನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಜೊತೆಗೆ ಬಹುಮುಖ್ಯವಾಗಿ ಈ ನೆಲದ ಜನರ ಧ್ವನಿಯಾಗುವ ಹಂಬಲದಿಂದ ಸಾರ್ವಜನಿಕ ಕುಂದು ಕೊರತೆಗಳನ್ನು ಹೇಳಿಕೊಳ್ಳಬಹುದು. ಓದುಗ ಪ್ರಭುಗಳಾದ ನೀವು ಪತ್ರಿಕೆಯ ಭಾಗವೂ ಹೌದು. ಹೀಗಾಗಿ ನಿಮ್ಮ ಪ್ರತಿಕ್ರಿಯೆಯೂ ನಮಗೆ ಅತ್ಯಮೂಲ್ಯ. **ಕಥೆ, ಕವನ, ಸಾಹಿತ್ಯ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಕ್ರೀಡೆ, ಕೃಷಿ, ಅಪರೂಪದ ವ್ಯಕ್ತಿಗಳು, ಅಂಕಣ, ಮಹಿಳೆ ಮತ್ತು ಮಕ್ಕಳು ಸೇರಿದಂತೆ ವಿವಿಧ ಕ್ಷೇತ್ರಗಳ** ಕುರಿತಾದ ನಿಮ್ಮ ಬರಹಗಳನ್ನೆಲ್ಲ ಸ್ವೀಕರಿಸುತ್ತೇವೆ ಆದರೆ, ಕಳುಹಿಸಿದ ಬರಹಗಳಲ್ಲಿ ಸಮಂಜಸ ಎನಿಸುವುದಷ್ಟೇ ಪ್ರಕಟಿಸುತ್ತೇವೆ. ನಮ್ಮ ನಂಬುಗೆಯ ಸಮಾಜಕ್ಕಾಗಿ ಒಳಿತನ್ನೇ ಬಯಸುತ್ತ, ಬರೆಯುತ್ತ ಎಲ್ಲರೂ ಒಳ ಗೊಳ್ಳೋಣ.

ಸಂಪಾದಕರು: **ಹಂಪಿ ಟೈಮ್ಸ್, ಶ್ರೀ ಓಂಕಾರೇಶ್ವರ ದೇವಸ್ಥಾನದ ಪಕ್ಕದಲ್ಲಿ, ವಾಲ್ಮೀಕಿ ವೃತ್ತದ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.**
ಇ-ಮೇಲ್:hampitimes@gmail.com
M: 9448633038

## ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

**– ಜಾಹೀರಾತು ವ್ಯವಸ್ಥಾಪಕರು.**

# ಹಿಮಾಲಯದ ಕಷ್ಟಗಳು



ಹಿಮಾಲಯವನ್ನು 'ದೇವಭೂಮಿ' ಎನ್ನಲಾಗುತ್ತದೆ. ಇಲ್ಲಿನ ಗಿಡಮೂಲಿಕೆ ಹಾಗೂ ಗುಹಾವಾಸಿ ಯೋಗಿಗಳ ದೀರ್ಘಾಯುಷ್ಯದ ಮೇಲೆ ದಂತಕತೆಗಳಿವೆ. ಬದುಕಿನಲ್ಲಿ ದಣಿದ ನಾಗರಿಕರು ತಮ್ಮ ಮರುಚೈತನ್ಯಕ್ಕಾಗಿ, ಯಾತ್ರಾರ್ಥಿಗಳು ಪುಣ್ಯ ಸಂಪಾದನೆಗಾಗಿ ಹಿಮಾಲಯ ಹುಡುಕಿ ಹೋಗುತ್ತಲೇ ಇದ್ದಾರೆ. ಇದು ಪ್ರೇಮಿಗಳ ಮಧುಚಂದ್ರದ ತಾಣವೆಂದೂ ಹೆಸರಾಗಿದೆ. ಹಿಮಶಿಖರಗಳ ಬುಡದಲ್ಲಿ, ಆಳ ಕಣಿವೆಯಲ್ಲಿ, ದೇವದಾರು ವೃಕ್ಷಗಳ ಅಡಿಯಲ್ಲಿ, ಹರಿವ ಹೊಳೆಗಳ ದಡದಲ್ಲಿ ಕಟ್ಟಿದ ಕಲ್ಲುಚಪ್ಪಡಿ ಮಾಡಿನ ಕಟ್ಟಿಗೆ ಗೋಡೆಗಳ ಮನೆಗಳನ್ನು ನೋಡುವಾಗ, ಇಲ್ಲಿನವರು ಸ್ವರ್ಗದಲ್ಲಿದ್ದಾರೆಂದೇ ಅನಿಸುತ್ತದೆ.

ಆದರೆ ತುಸು ತಾಳ್ಮೆಯಿಂದ ಗಮನಿಸಿದರೆ, ಈ ಭೂಸ್ವರ್ಗದಲ್ಲಿ ಭೂಕುಸಿತ, ಕೊಚ್ಚಿಹಾಕುವ ಹೊಳೆ, ಹಿಮಪಾತ, ಸಾಯಿಸುವ ಥಂಡಿಗಳಿರುವುದೂ ತಿಳಿಯುತ್ತದೆ; ಕಠಿಣ ಹವಾಮಾನದೊಳಗೆ ಪರಿಮಿತ ಸಂಪನ್ಮೂಲಗಳಲ್ಲಿ ಜನ ನಿತ್ಯವೂ ಹೋರಾಡುವುದು ಕಾಣುತ್ತದೆ. ನಿರ್ಜನ ಪ್ರದೇಶಕ್ಕೆ ಹೋಗಿ, ಕಾಡನ್ನು ಕಡಿದು ಹೊಳೆಯನ್ನು ತಿರುಗಿಸಿ ಕೃಷಿ ಮಾಡಿದ ಸಾಹಸಿಯನ್ನು ಕುರಿತು ಕಾರಂತರು 'ಬೆಟ್ಟದಜೀವ' ಕಾದಂಬರಿ ಬರೆದರು. ನಿಸರ್ಗದೊಡನೆ ಹೋರಾಡುವ ಹಿಮಾಲಯಿಗರು ಈ ಅರ್ಥದಲ್ಲಿ ಬೆಟ್ಟದಜೀವಗಳೇ. ಆದರೆ ಈ ಬೆಟ್ಟದಜೀವಗಳು ಹೊಸ ಬದುಕನ್ನು ಕಟ್ಟಿಕೊಳ್ಳಲು ಬಂಧನಕಾರಿಯಾದ ಪರ್ವತ-ಕಣಿವೆಗಳ ನಾಡನ್ನು ತೊರೆದು ಕೆಳಗಿನ ಬಯಲಿನತ್ತ ಹರಿಯಲು ಹಾತೊರೆಯುವರು ಎನ್ನುವುದು ಕಹಿಸತ್ಯ.

ಹಿಮಾಲಯದಲ್ಲಿ ಚಾರಣಿಗರಿಗೆ ಎದ್ದು ಕಾಣುವ ಸಂಗತಿಗಳೆಂದರೆ, ಅಪೌಷ್ಟಿಕತೆಯಿಂದ ಬಳಲುವ ಹರುಕು ಬಟ್ಟೆಯುಟ್ಟ ಮಕ್ಕಳು ಟಾಪಿ ಕೇಳುವುದು; ಔಷಧಿ ಬೇಡಲು ಊರ ಜನ ನಮ್ಮ ಹಾದಿಬದಿ ನಿಲ್ಲುವುದು. ಚಂದ್ರಖಾನಿ ಚಾರಣದಲ್ಲೊಮ್ಮೆ ಕಟ್ಟಿಗೆ ಹೊತ್ತವನೊಬ್ಬ ಮಗುವಿನ ಬೇಧಿ ನಿಲ್ಲಲು ಔಷಧಿ ಕೇಳಿದ. ನಮ್ಮ ತಂಡದಲ್ಲಿ ದಂತವೈದ್ಯರಿದ್ದರು. ಆಗ 'ಹಾಗಾದರೆ ಅದರ ಮದ್ದೇ ಕೊಡಿ. ನನ್ನ ಹೆಂಡತಿಗೆ ಹಲ್ಲುನೋವಿದೆ' ಎಂದ. ಮತ್ತೊಬ್ಬ ತಾಯಿಗೆ ಮೊಣಕಾಲು ನೋವು ಎಂದ. ಮೇಕೆಗೆ ಸೊಪ್ಪು ತರಲೆಂದು ಹೋಗುತ್ತಿದ್ದವಳೊಬ್ಬಳು ಕಣ್ಣಿಗೆ ಮದ್ದು ಇದೆಯಾ ಎಂದು ಕೇಳಿದಳು. ಜೋಶಿಮಠದಲ್ಲಿದ್ದಾಗ ನಮ್ಮ ಊರುಮನೆಯನ್ನೆಲ್ಲ ವಿಚಾರಿಸುತ್ತಿದ್ದ ಒಬ್ಬಾಕೆ 'ನೀವೇನೇ ಹೇಳಿ, ನಮ್ಮಲ್ಲಿಯ ಶುದ್ಧ ನೀರು ಗಾಳಿ ಎಲ್ಲೂ ಸಿಗದು' ಎಂದು ಪಿಚ್ಚನೆ ನಕ್ಕಳು. ಅವಳ ಸುಂದರ ಮುಖಕ್ಕೆ ದೃಷ್ಟಿಬೊಟ್ಟಿಟ್ಟಂತೆ ಹಲ್ಲು ಹುಳುಕಾಗಿದ್ದವು. ಹಿಮಾಲಯದ ಚಳಿಗೂ ನೀರಿಗೂ ದಂತಕ್ಷಯಕ್ಕೂ ನಂಟಿರಬೇಕು. ವೈದ್ಯರ ಆಸ್ಪತ್ರೆಗಳ ಕೊರತೆಯಂತೂ ಅಗಾಧ. ನಮ್ಮ 'ಹೂವಿನ ಕಣಿವೆ' ಚಾರಣ ತಂಡದಲ್ಲಿ ಬಹುಪಾಲು ವೈದ್ಯರಿದ್ದರು. ನಮಗೆ ಹಾದಿಯಲ್ಲಿ ಉತ್ತರಾಖಂಡದ ಆರೋಗ್ಯಮಂತ್ರಿ ಭೇಟಿ ಮಾಡುವ ಅವಕಾಶ ಸಿಕ್ಕಿತ್ತು. ಮಂತ್ರಿಗಳು ತಮ್ಮಲ್ಲಿ ವೈದ್ಯರ





**ರಹಮತ್ ತರೀಕೆರೆ**
**ಸಂಸ್ಕೃತಿ ಚಿಂತಕರು**

ಕೊರತೆಯಿರುವುದನ್ನು ಒಪ್ಪಿಕೊಂಡರು. ಹಿಮಾಲಯಕ್ಕೆ ಆರೋಗ್ಯ ಹುಡುಕಿಕೊಂಡು ಹೋದವರಿಗೆ ಸ್ಥಳೀಯರ ನೂರೆಂಟು ಕಾಯಿಲೆ ಕಷ್ಟಗಳ ದರ್ಶನ.

ಚೆಲ್ಲಿಕೊಂಡ ಮನೆಗಳಿರುವ ಹಿಮಾಲಯದಲ್ಲಿ ಆಧುನಿಕ ಶಿಕ್ಷಣ ಕಡಿಮೆ. ಸರ್ಕಾರಿ ನೌಕರಸ್ಥರೂ ಹೆಚ್ಚಿಲ್ಲ. ಬಹುಮಂದಿ ರೈತರು ಇಲ್ಲವೇ ಕೂಲಿಕಾರರು. ದುರ್ಗಮ ಕಾಡುಬೆಟ್ಟಗಳು ಆರ್ಥಿಕ ಸಾಮಾಜಿಕ ಹಿಂದುಳಿಕೆಗೂ ಕಾರಣವಾಗಿವೆ. ಯಮುನೋತ್ರಿ ಹಾದಿಯಲ್ಲಿರುವ ಸಾಯನ್‌ಚೆಟ್ಟಿಯಲ್ಲಿ ಶಾಲಾಮಕ್ಕಳಿಗೆ 'ನಿಮಗೆ ಕಷ್ಟದ ಸಂಗತಿ ಯಾವುದು?' ಎಂದು ಕೇಳಿದೆ. ಶಾಲೆ ಬಿಟ್ಟ ಬಳಿಕ ಜಾರುನೆಲದಲ್ಲಿ ಮಳೆಯಲ್ಲಿ ಒಬ್ಬರೇ ಮನೆ ತಲುಪುವುದು ಎಂದರು. ಗೌರಿಕುಂಡದಲ್ಲಿ ನನ್ನೊಡನೆ ಮಾತಾಡಿದ ಹೆಂಗಸು ಅಡುಗೆಗ್ಯಾಸ್ ಇಲ್ಲದಿರುವುದು ದೊಡ್ಡ ಸಮಸ್ಯೆ ಎಂದಳು. ಆಕೆ ಜೀವನದಲ್ಲಿ ಓಟು ಕೂಡ ಹಾಕಿರಲಿಲ್ಲ. ಸಂಕರಿಯಿಂದ ತಾಲೂಕ ಎಂಬ ಕೊನೆಯ ಹಳ್ಳಿಯವರೆಗೆ ಬಸ್ಸಿಲ್ಲದ ಹಾದಿಯಲ್ಲಿ ಕೂಸುಸತ್ತ ಬಾಣಂತಿಯನ್ನು ನಡೆಸಿಕೊಂಡು ಬರುವುದನ್ನು; ರೊಹತಾಂಗ್ ಪಾಸಿನಲ್ಲಿ ಶೂನ್ಯಡಿಗ್ರಿ ಚಳಿಯಲ್ಲಿ ಕೂಸನ್ನು ಬೆನ್ನಿಗೆ ಕಟ್ಟಿಕೊಂಡು ರಸ್ತೆಗೆಬಿದ್ದ ಹಿಮವನ್ನು ಗುಡಿಸುತ್ತಿದ್ದ ಪಹಾಡಿ ಮಹಿಳೆಯನ್ನು ನಾವು ಕಂಡಿದ್ದುಂಟು. ನಮ್ಮ ಬಸ್ಸಿನ ಕಂಡಕ್ಟರ್ ಭಂಡಾರಿ, ಬಸ್ಸು ಪ್ರಪಾತಕ್ಕೆ ಬೀಳದಂತೆ ಚಲಿಸುವ ಚಕ್ರವನ್ನೇ ನೋಡಲು ನೇಮಕವಾದಂತೆ ಬಾಗಿಲಿಗೆ ನೇತು ಬಿದ್ದಿರುತ್ತಿದ್ದನು. ಅವನ ಚಹರೆ, ಹಿಮಾಲಯ ಪ್ರಾಂತ್ಯಕ್ಕೆ ಶತಮಾನಗಳಿಂದ ಟಿಬೆಟ್ ಕಡೆಯಿಂದ ಮಂಗೋಲಿಯನ್ ಜನಾಂಗದ ವಲಸೆಯಿಂದಾದ ಸಂಕರವನ್ನು ಸೂಚಿಸುತ್ತಿತ್ತು. ಭಂಡಾರಿಗೆ ಸೈನಿಕನಾಗುವ ಆಸೆ. ಅದಕ್ಕಾಗಿ ಲಕ್ಷ ಕೊಡಲೂ ತಯಾರು. ಆದರೆ ಕೆಲಸ ಸಿಗುತ್ತಿಲ್ಲ. ಮದುವೆ ವಯಸ್ಸು ಮೀರುತ್ತಿದೆ. ಕನ್ಯಾಶುಲ್ಕ ಹೊಂದಿಸುವುದು ಆಗುತ್ತಿಲ್ಲ. ಅವನ ಪ್ರಕಾರ ಹಿಂದೆ ಕನ್ಯಾಶುಲ್ಕಕ್ಕಾಗಿ ಹಲವು ಮದುವೆಯಾದ ಹೆಂಗಸರು ಇದ್ದರಂತೆ. ಈಗ ವರದಕ್ಷಿಣೆ ಪದ್ಧತಿ ಶುರುವಾಗಿದೆ.

ಹಿಮಾಲಯದ ಹೆಚ್ಚಿನ ಯುವಕರು ಪೋರ್ಟರು ಇಲ್ಲವೇ ಪ್ರವಾಸಿಗೈಡುಗಳು. ಬೆನ್ನಮೇಲೆ ಭಾರ ಹೊತ್ತು ನಡೆವವರು. ಕಾಲೇಜು ಕಲಿಯಲಾಗದ, ಕಲಿತರೂ ಕೆಲಸವಿಲ್ಲದ ಅವರು, ತಲೆಹೊರೆ ಡೋಲಿ ಕುದುರೆ ಬೆನ್‌ತೊಟ್ಟಿಲುಗಳ ಮೂಲಕ ಚಾರಣಿಗರಿಗೂ ಯಾತ್ರಿಗಳಿಗೂ ನೆರವಾಗುವರು. ಡೋಲಿಯಲ್ಲಿರುವ ಯಾತ್ರಿಕರು ಚಟ್ಟದಲ್ಲಿದ್ದಂತೆ ಆಗಸಕ್ಕೆ ಮುಖಮಾಡಿ ಮಲಗಿಬಿಡುವರು. ಬುಟ್ಟಿಗಳಲ್ಲಿರುವವರು ಕೂಸುಮಾರಿ ಮಕ್ಕಳಂತೆ ಕೂರುವರು. ಬೆನ್ನತೊಟ್ಟಿಲ ಮೇಲೆ ತಮಗಿಂತ ದುಪ್ಪಟ್ಟು ಒಜ್ಜೆಯ ಯಾತ್ರಿಕರನ್ನು ಹೊತ್ತು ಪರ್ವತ ಏರುವವರ ಕಷ್ಟ ಹೇಳತೀರದು. ಕೇದಾರ ಹಾದಿಯಲ್ಲಿ ಒಬ್ಬ ಬಡಕಲು ಪೋರ್ಟರ್, ಸ್ಥೂಲಕಾಯದ ಯಾತ್ರಿಕಳನ್ನು ಹೊತ್ತುಕೊಂಡಿದ್ದ. ಕೆಳಗಿಳಿಯುತ್ತ ಆಯತಪ್ಪಿ ಜಾರಿ ಬಿದ್ದನು. ಆಕೆಗೂ ತುಸು ಪೆಟ್ಟಾಗಿರಬೇಕು. ಕೂಗಾಡಿದಳು. ನಿನಗೆ ಮಜೂರಿ ಕೊಡುವುದಿಲ್ಲ ಎಂದು ಘೋಷಿಸಿದಳು. ಆತ ಗೋಗರೆದ. ಭಿಕ್ಷುಕರಂತೆ ಅವಳ ಹಿಂದಿಂದೆಯೇ ಹೋದ. ಆಕೆ ಕರಗಲಿಲ್ಲ. ಅವನು ಎಳೆಯ ಮಗುವಿನಂತೆ ಅಳತೊಡಗಿದ. ಅವಸ್ಥೆ ನೋಡಲಾರದೆ ನಾವೇ ರೊಕ್ಕ ಕೂಡಿಸಿಕೊಟ್ಟೆವು. ಇಂತಹ ವಿಷಾದದ ಗಳಿಗೆಗಳು ಯಾತ್ರೆಗಳಲ್ಲಿರುತ್ತವೆ. ಚಾರಣದಲ್ಲಲ್ಲ.

ಬಿಸಿರಕ್ತ ಇರುವವರೆಗೆ ದುಡಿವ ಪೋರ್ಟರು-ಗೈಡುಗಳು, ನಡುವಯಸ್ಸು ಮೀರಿದ ಬಳಿಕ ದನಗಾಹಿ ಆಗುವರಂತೆ. ವಿಶೇಷವೆಂದರೆ, ಇಲ್ಲಿನ ತರುಣ-ತರುಣಿಯರು ಚಿಕ್ಕವಯಸ್ಸಿನಲ್ಲೇ ಮದುವೆಯಾಗುವುದು. ಚಂದ್ರಖಾನಿ ಚಾರಣದ ಹಾದಿತೋರುಗ ಹದಿನೇಳರ ಪ್ರಾಯದ ಸೈದರ್ ಸಿಂಗನಿಗೆ ಕೇಳಿದೆ.

**"ಯಾಕಿಷ್ಟು ಬೇಗ ಮದುವೆಯಾದೆ?"**

**"ನನಗೆ ಇಷ್ಟವಿರಲಿಲ್ಲ. ಮನೆಯವರೆಲ್ಲ ಸೇರಿ ಮಾಡಿದರು"**

**"ನಿನಗೆ ಜಮೀನಿಲ್ಲವೊ?"**

"ಇಲ್ಲದೆ ಏನು? ಆದರೆ ಅದರಲ್ಲಿ ಬದುಕು ನಡೆಯುವುದಿಲ್ಲ. ನಮ್ಮ ಹಿಡುವಳಿ ಚಿಕ್ಕವು. ಅದರ ಉತ್ಪನ್ನದಲ್ಲಿ ಎರಡು ಹೊತ್ತು ಉಣ್ಣಬಹುದು. ಮೇಲೆ ಹೋಗಲಾಗದು. ಪಶುಪಾಲನೆಯಲ್ಲೂ ಆದಾಯವಿಲ್ಲ. ಗೈಡ್-ಪೋರ್ಟರ್ ಕೆಲಸವಾದರೆ, ಬಟ್ಟೆಬರೆ ಹಬ್ಬ ಮದುವೆ ಖರ್ಚುಗಳಿಗೆ ರೊಕ್ಕ ಸಿಗುತ್ತದೆ"

ಹಿಮಾಲಯದ ಪೋರ್ಟರುಗಳಿಗೆ ಸ್ಪರ್ಧೆ ನೇಪಾಲದ ಕಾರ್ಮಿಕರಿಂದ. ಕುಫ್ರಿ ಎಂಬಲ್ಲಿ ನಮಗೆ ಕುದುರೆ ಸವಾರಿ ಮಾಡಿಸಿದ ಬಂಟು 16 ವರ್ಷದವನು. ದಿನವಹಿ 50 ರೂಪಾಯಿಗಾಗಿ ಕುದುರೆ ಕಡಿವಾಣ ಹಿಡಿದುಕೊಂಡು ಪ್ರವಾಸಿಗರನ್ನು ಕಣಿವೆಯ ಆಳಕ್ಕೆ ಕರೆದೊಯ್ಯುವವನು. ಮೈಯೆಲ್ಲ ಕಜ್ಜಿ. ನೇಪಾಲದಲ್ಲಿರುವ ತಂದೆ ತಾಯಿಗೆ ತಿಂಗಳಾ 500 ರೂಪಾಯಿ ಕಳಿಸುತ್ತಾನಂತೆ. ತಮ್ಮಂದಿರು ಶಾಲೆಗೆ ಹೋಗುತ್ತಾರಂತೆ.

ಮುಂದುವರೆಯುವುದು.......

# ತೆರಿಗೆ ಪಾಲು ನೀಡುವಲ್ಲಿ ಕೇಂದ್ರ ತಾರತಮ್ಯ: ಸಿಎಂ ಸಿದ್ದರಾಮಯ್ಯ

**ಬೆಂಗಳೂರು :** ನಾವು ಪ್ರಜಾಪ್ರಭುತ್ವ ಮತ್ತು ಒಕ್ಕೂಟ ವ್ಯವಸ್ಥೆಯನ್ನು ಒಪ್ಪಿಕೊಂಡ ಮೇಲೆ ಚೀನಾ ಮಾದರಿ ಏಕಸ್ವಾಮ್ಯವನ್ನು ಸಹಿಸಲು, ಅಮೆರಿಕದ ಅಧ್ಯಕ್ಷೀಯ ಮಾದರಿ ಆಡಳಿತವನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಎಕ್ಸ್ (ಟ್ವಿಟರ್) ಸ್ಪೇಸ್ ನಲ್ಲಿ ಇಂದು ನಡೆದ ನಮ್ಮ ಹಕ್ಕು ನಮ್ಮ ತೆರಿಗೆ ಕನ್ನಡಿಗರ ಅಭಿಯಾನದ ಕುರಿತ ಸಾರ್ವಜನಿಕರ ಪ್ರಶ್ನೆಗಳಿಗೆ ಉತ್ತರಿಸುತ್ತಾ ಮಾತನಾಡಿದರು. ಸಂವಿಧಾನ ಬದ್ಧವಾದ ಒಕ್ಕೂಟ ವ್ಯವಸ್ಥೆಯನ್ನು ಇಡಿ ದೇಶ ಒಪ್ಪಿಕೊಂಡಿದೆ. ರಾಜ್ಯ ಮತ್ತು ಕೇಂದ್ರಗಳಿಗೆ ಜನರ ತೆರಿಗೆ ಹಣ ಹಂಚಿಕೆ ಆಗುತ್ತದೆ. ಇದಕ್ಕಾಗಿ 5 ವರ್ಷಕ್ಕೊಮ್ಮೆ ಹಣಕಾಸು ಆಯೋಗ ರಚನೆಯಾಗಿ ಇದರ ಶಿಫಾರಸ್ಸುಗಳನ್ನು ಕೇಂದ್ರ ಸರ್ಕಾರ ಜಾರಿ ಮಾಡುತ್ತದೆ.

15 ನೇ ಹಣಕಾಸು ಆಯೋಗದಲ್ಲಿ ರಾಜ್ಯಕ್ಕೆ ಬಹಳ ದೊಡ್ಡ ಪ್ರಮಾಣದಲ್ಲಿ ಅನ್ಯಾಯ ಆಗಿದೆ. 14 ನೇ ಆಯೋಗದಲ್ಲಿ ರಾಜ್ಯದ ತೆರಿಗೆ ಪಾಲು ಹಂಚಿಕೆ 4.71% ಇದ್ದದ್ದು 15ನೇ ಹಣಕಾಸು ಆಯೋಗದಲ್ಲಿ 3.64 % ಕ್ಕೆ ಕಡಿತ ಮಾಡಿಬಿಟ್ಟರು. ಅಂದರೆ 1.07% ನಮಗೆ ಕಡಿತ ಆಗಿ ಇದರಿಂದ ತೆರಿಗೆ ಹಂಚಿಕೆಯಲ್ಲಿ ರಾಜ್ಯಕ್ಕೆ 5 ವರ್ಷದಲ್ಲಿ ದೊಡ್ಡ ಹೊಡೆತ ಬಿದ್ದು ರಾಜ್ಯಕ್ಕೆ 1,87000 ಕೋಟಿ ನಷ್ಟ ಆಗಿದೆ. ಅಂದರೆ ನಾವು ಕೊಡುವ ತೆರಿಗೆಯ 100 ರೂನಲ್ಲಿ ನಮಗೆ ವಾಪಾಸ್ ಬರೋದು ಕೇವಲ 12-13 ರೂ ಮಾತ್ರ. ಬೆಂಗಳೂರು ಫೆರಿಫೆರಲ್ ನಿರ್ಮಾಣ ಮತ್ತು ಕೆರೆಗಳ ಅಭಿವೃದ್ಧಿಗೆ 6000 ಕೋಟಿ ಸೇರಿ ಒಟ್ಟು 11495 ಕೋಟಿ ವಿಶೇಷ ಅನುದಾನ ಕೊಡಲು ಆಯೋಗ ಶಿಫಾರಸ್ಸು ಮಾಡಿತ್ತು. ಇದನ್ನು ಕೊಡಬಾರದು ಎಂದು ತೀರ್ಮಾನ ಮಾಡಿ ತಡೆದವರು ನಿರ್ಮಲಾ ಸೀತಾರಾಮನ್. ರಾಜ್ಯದಿಂದ ಆಯ್ಕೆಯಾದ ನಿರ್ಮಲಾ ಸೀತಾರಾಮನ್ ರಾಜ್ಯಕ್ಕೆ ಇಷ್ಟು ದೊಡ್ಡ ಅನ್ಯಾಯ ಮಾಡಿಬಿಟ್ಟರು.

ಸೆಸ್ ಮತ್ತು ಸರ್ ಚಾರ್ಜ್ ನಿಂದ ಸಂಗ್ರಹ ಆಗಿದ್ದ ತೆರಿಗೆರಲ್ಲಿ ಒಂದು ರೂಪಾಯಿಯನ್ನೂ ಕೇಂದ್ರ ರಾಜ್ಯಗಳಿಗೆ ಕೊಡುವುದಿಲ್ಲ. ಆದ್ದರಿಂದ ಇದರಲ್ಲೂ ನಾವು ರಾಜ್ಯಗಳು ಪಾಲು ಕೇಳಬೇಕು ಎಂದು ತೀರ್ಮಾನ ಮಾಡಿದ್ದೇವೆ. ಇದಕ್ಕಾಗಿ ಸಂವಿಧಾನಕ್ಕೆ ತಿದ್ದುಪಡಿ ತನ್ನಿ ಎಂದು ನಾನು ಒತ್ತಾಯಿಸುತ್ತೇನೆ. ಇದಕ್ಕೇ ನಾನು ಹೇಳೋದು, "ನನ್ನ ತೆರಿಗೆ ನನ್ನ ಹಕ್ಕು" ಎಂದು ನಾನು ಹೇಳೋದು.



ರಾಜ್ಯಗಳ ಅಭಿವೃದ್ಧಿಗೆ ಸೆಸ್, ಸರ್ ಚಾರ್ಜ್ ನಲ್ಲಿ ಪಾಲು ಕೊಡಲೇಬೇಕು. ರಾಜ್ಯಗಳ ಅಭಿವೃದ್ಧಿ ಆಗದೆ ದೇಶದ ಅಭಿವೃದ್ಧಿ ಹೇಗೆ ಸಾಧ್ಯ? ರಾಜ್ಯಗಳು ದುರ್ಬಲ ಆದ್ರೆ ದೇಶ ದುರ್ಬಲ ಆಗ್ತದೆ. ರಾಜ್ಯಗಳು ಸುಭದ್ರ ಆಗಿದ್ದರೆ ದೇಶವೂ ಸುಭದ್ರ ಆಗ್ತದೆ. ದೇಶ ಅಂದರೆ ರಾಜ್ಯಗಳ ಒಕ್ಕೂಟ. ತೆರಿಗೆ ವಸೂಲಾಗೋದೇ ರಾಜ್ಯಗಳಿಂದ. ಹೀಗಿದ್ದಾಗ ರಾಜ್ಯಗಳಿಗೆ ನ್ಯಾಯಯುತವಾದ ತೆರಿಗೆ ಕೊಡಿ ಎನ್ನುವುದು ನಮ್ಮ ಒತ್ತಾಯ.

ಅಭಿವೃದ್ಧಿಯನ್ನೇ ಮಾಡದ ಉತ್ತರ ಪ್ರದೇಶಕ್ಕೆ 2,18,000 ಸಾವಿರ ಕೋಟಿಗೂ ಅಧಿಕ ಹಣ ಹೋಗ್ತದೆ. ನಮಗೆ 52000 ಸಾವಿರ ಕೋಟಿ ಮಾತ್ರ ಕೊಡ್ತಾರೆ. ಇದನ್ನು ಸಹಿಸಬೇಕಾ? ಆದರೆ ಉತ್ತರ ಪ್ರದೇಶದ ಜನಸಂಖ್ಯೆ ಹೆಚ್ಚಾಗಿದ್ದರೂ ಅವರಿಂದ ಬರುವ ತೆರಿಗೆ ಕಡಿಮೆ. ಉತ್ತರ ಪ್ರದೇಶಕ್ಕೆ ಕೊಡಬೇಡಿ ಎನ್ನುವುದು ನಮ್ಮ ವಾದವಲ್ಲ. ನಮಗೆ ಅನ್ಯಾಯ ಮಾಡಬೇಡಿ ಎನ್ನುವುದು ನಮ್ಮ ಆಗ್ರಹ. ಮೋದಿ ಅವರು ಪ್ರಧಾನಿ ಆದ ಬಳಿಕ ಕಾರ್ಪೋರೇಟ್ ಮೇಲಿನ ತೆರಿಗೆ ಪ್ರಮಾಣವನ್ನು 30% ನಿಂದ 22.5%ಕ್ಕೆ ಇಳಿಸಿದರು. ಕಾರ್ಪೋರೇಟ್ ಗಳಿಗೆ ಕಡಿಮೆ ಮಾಡಿ ಅದರ ಹೊರೆಯನ್ನು ಜನಸಾಮಾನ್ಯರ ಮೇಲೆ ಹೇರಿದರು. ಅಂದರೆ ಬಡವರು, ಮಧ್ಯಮ ವರ್ಗದವರಿಂದ ತೆರಿಗೆ ವಸೂಲಿ ಮಾಡುವುದನ್ನು ಹೆಚ್ಚೆಚ್ಚೆ ಮಾಡುತ್ತಲೇ ಹೋಗುತ್ತಿದ್ದಾರೆ. ನಮ್ಮ ಸಂಸದರು, ಕೇಂದ್ರದಲ್ಲಿ ಮಂತ್ರಿಗಳಾಗಿರುವವರು ಯಾರೂ ದೆಹಲಿಯಲ್ಲಿ ಈ ಅನ್ಯಾಯವನ್ನು ಪ್ರಶ್ನಿಸುವುದೇ ಇಲ್ಲ. ನಾವು ನಮ್ಮ ಹಕ್ಕುಗಳಿಗಾಗಿ ಹೋರಾಟ ಮಾಡುತ್ತಲೇ ಒಕ್ಕೂಟ ವ್ಯವಸ್ಥೆಯಲ್ಲಿ ಇದ್ದುಕೊಂಡು , ಒಕ್ಕೂಟ ವ್ಯವಸ್ಥೆಯನ್ನು ಬಲಪಡಿಸುತ್ತೇವೆ.

ಸಾಮಾನ್ಯ ಜನರ ಖರ್ಚಿನ ಮೇಲೆ ಹಾಕುವ ಉಖಖಿ ತೆರಿಗೆ ಪ್ರಮಾಣ ಕಡಿಮೆ ಆಗಿ, ಶ್ರೀಮಂತರು ಬಳಸುವ ಐಷಾರಾಮಿ ವಸ್ತುಗಳ ಮೇಲೆ ಉಖಖಿ ಹೆಚ್ಚಿಸಲೇಬೇಕು.

ತಮ್ಮ ಆದಾಯಕ್ಕೂ ತೆರಿಗೆ ಕಟ್ಟಿ, ತಾವು ಮಾಡುವ ಖರ್ಚಿಗೂ ತೆರಿಗೆ ಕಟ್ಟುವ ಜನರು ಅವರ ಹಣಕ್ಕೆ, ನಮ್ಮ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯವನ್ನು ಅರ್ಥ ಮಾಡಿಕೊಳ್ಳಬೇಕು. ಇದೇ ಮೋದಿ ಅವರು ಗುಜರಾತ್ ಮುಖ್ಯಮಂತ್ರಿ ಆಗಿದ್ದಾಗ 50 % ತೆರಿಗೆ ಪಾಲು ಕೊಡಿ ಎಂದು ಕೇಂದ್ರಕ್ಕೆ ಕೇಳಿದ್ದರು. ರಾಜ್ಯಗಳು ಭಿಕ್ಷುಕರಾ ಎಂದು ಮೋದಿ ಕೇಳಿದ್ದರು. ಕೇಂದ್ರಕ್ಕೆ ಒಂದು ರೂಪಾಯಿ ತೆರಿಗೆಯನ್ನೂ ಕೊಡುವುದಿಲ್ಲ. ಎಲ್ಲವನ್ನೂ ರಾಜ್ಯವೇ ಇಟ್ಟುಕೊಳ್ತೀವಿ ಎಂದು ಇದೇ ನರೇಂದ್ರ ಮೋದಿ ಹೇಳಿದ್ದರು. ಈಗ ಪ್ರಧಾನಿ ಆದ ಮೇಲೆ ಉಲ್ಟಾ ಮಾತಾಡುತ್ತಿದ್ದಾರೆ.

ರಾಜ್ಯದಲ್ಲಿ ಬಿಜೆಪಿ ಸರ್ಕಾರ ಇದ್ದಾಗ ನಾನು ಸದನದಲ್ಲಿ ಪದೇ ಪದೇ ಹೇಳಿದ್ದೆ. "ಯಡಿಯೂರಪ್ಪ, ಬೊಮ್ಮಾಯಿ ಇಬ್ಬರೂ ಮುಖ್ಯಮಂತ್ರಿಗಳಾಗಿ ರಾಜ್ಯದ ಪಾಲನ್ನು ತರಲು ಪ್ರಯತ್ನಿಸಲೇ ಇಲ್ಲ. ಈಗ ಪ್ರಹ್ಲಾದ್ ಜೋಶಿಯವರೂ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯ ಪ್ರಶ್ನೆ ಮಾಡದೆ, ಅನ್ಯಾಯವನ್ನು ಸಮರ್ಥಿಸುತ್ತಿದ್ದಾರೆ. ಇವರು ರಾಜ್ಯವನ್ನು ಪ್ರತಿನಿಧಿಸುತ್ತಿದ್ದಾರೆ ಎನ್ನುವುದನ್ನೇ ಮರೆತು ಮಾತಾಡಿದ್ದಾರೆ.

ನಾವು ಪ್ರಜಾಪ್ರಭುತ್ವ, ಒಕ್ಕೂಟ ವ್ಯವಸ್ಥೆಯನ್ನು ಒಪ್ಪಿಕೊಂಡಿದ್ದೇವೆ. ಹೀಗಿದ್ದಾಗ ಚೀನಾ ರೀತಿಯ ಕೇಂದ್ರದ ಏಕಸ್ವಾಮ್ಯ ಮತ್ತು ಅಮೆರಿಕದ ಅಧ್ಯಕ್ಷೀಯ ಮಾದರಿಯ ಆಡಳಿತವನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ. ನಾವು ಪ್ರಜಾಪ್ರಭುತ್ವ ಮತ್ತು ಒಕ್ಕೂಟ ವ್ಯವಸ್ಥೆ ಪರವಾಗಿ ಇರುವವರು ಎಂದು ಸ್ಪಷ್ಟಪಡಿಸಿದರು.

ಕನ್ನಡ ಬಾವುಟ ಮತ್ತು ದ್ವಿಭಾಷಾ ನೀತಿಯ ವಿಚಾರದಲ್ಲೂ ಜನ ಎಚ್ಚೆತ್ತುಕೊಂಡು ಹೋರಾಟ ಮಾಡುವ ಅಗತ್ಯವಿದೆ. ಭಾಷೆಯಾಗಿ ಯಾವ ಭಾಷೆಯನ್ನಾದರೂ ಕಲಿಯಬಹುದು. ಆದರೆ ಕನ್ನಡದ ಮೇಲೆ ಹಿಂದಿ ಅಥವಾ ತರೆ ಭಾಷೆಯ ಹೇರಿಕೆ, ಸಾಂಸ್ಕೃತಿಕ ಹೇರಿಕೆಯನ್ನು ಸಹಿಸಲು ಸಾಧ್ಯವಿಲ್ಲ ಎಂದರು.

ಕವಿ ಮನಸು

## ಸುಮಬಾಲೆ



ಹೃದಯದ ನೂರೆಂಟು
ನವಿರು ಭಾವಗಳ
ಮೆರವಣಿಗೆಯಲ್ಲಿ
ಕೋಮಲ ಕನಸುಗಳ
ಹೊತ್ತ ಧಾರಿಣಿ ನೀನು!

ಕಣ್ಣ ಪಸೆಯಲ್ಲಿ
ಜಾರುವ ಇರುಳ
ಹುಣ್ಣಿಮೆಯಾಗಿ
ಅರಳಿದ
ಚೆಲುವಿಗೆ
ಸಾರಥಿಯಾದ
ಚಂದ್ರವದನೆ ನೀನು!

ಕಂಗಳ ಅಂದದ
ಅಂಗಳದಲ್ಲಿ
ಹೊಳೆಯುವ ನಕ್ಷತ್ರದ
ಬೆಳಕಾಗಿ ಎದೆಗಡಲ
ಅಲೆಯಲ್ಲಿ
ಬಿಂಬವಾದವಳು ನೀನು!

ಮೌನದ ಪ್ರತಿ ಕ್ಷಣದ
ಅಂಚಿನಲಿ ಅದೆಷ್ಟೋ
ಮಾತುಗಳ ಬಂಧಿಸಿ
ಹಸನಾದ ಒಲವುಗಳ
ಹೂಬಳ್ಳಿಯಲಿ
ಪ್ರೇಮದ ಚಿತ್ತಾರ
ಬರೆದವಳು ನೀನು!


ಎದೆಭಾವ ಕವಿತೆಯಲಿ
ಅಕ್ಷರವಾಗಿ ಮಧುರ
ಪದಗಳಾಗಿ ನನ್ನೆರಡು
ಸಾಲಿನಲಿ ಭಾವಪೂರ್ಣ
ಮುತ್ತಾದವಳು ನೀನು!

ಮತ್ತು
ನಿನ್ನೊಳಗೆ ನಾ
ಸೇರಿ ನನ್ನೊಳಗೆ ನೀ
ಬಂದು
ಅರ್ಥವಾಗದ
ಪಥದಲ್ಲಿ ಸಾಗುತ್ತಿರುವ
ದೀರ್ಘ ಪಯಣಿಗರು
ನಾವು!

ನಾ ನಿನ್ನೊಂದಿಗಿರುವಾಗ
ನೀ
ಎಂದೂ ಒಂಟಿಯಲ್ಲ!

– ಗಣಪತಿ ಹೆಗಡೆ

## ತುಂಗಭದ್ರಾ ನೀರಿನ ಮಟ್ಟ



ಬುಧವಾರ: 14–02–2024

| | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1587.92 ಅಡಿ |
| ಒಳ ಹರಿವು | 00 ಕ್ಯುಸೆಕ್ |
| ಹೊರ ಹರಿವು | 163 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 9.379 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |

ಕಳೆದ ವರ್ಷ ಇದೇ ದಿನ

| | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1611.56 ಅಡಿ |
| ಒಳ ಹರಿವು | 00 ಕ್ಯುಸೆಕ್ |
| ಹೊರ ಹರಿವು | 8384 ಕ್ಯುಸೆಕ್ |
| ಸಾಮರ್ಥ್ಯ | 40.742 ಟಿಎಂಸಿ |

# ಯಶಸ್ವಿಯಾಗಿ ಸಂಚರಿಸುತ್ತಿದೆ ಜಾಗೃತಿ ಜಾಥಾ

## ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಹೇಳಿಕೆ | ಸಂವಿಧಾನದ ಆಶಯ ಹಾಗೂ ಮೌಲ್ಯಗಳ ಕುರಿತು ಜನರಲ್ಲಿ ಅರಿವು ಮೂಡಿಸಬೇಕು

■ ಹಂಪಿ ಟೈಮ್ಸ್ ಬಳ್ಳಾರಿ

ಭಾರತದ ಸಂವಿಧಾನ ಅಂಗೀಕಾರಗೊಂಡ 75ನೇ ವರ್ಷದ ಆಚರಣೆಯ ಪ್ರಯುಕ್ತ ಸಂವಿಧಾನದ ಆಶಯ ಮತ್ತು ಮೌಲ್ಯಗಳ ಕುರಿತು ಜನರಲ್ಲಿ ಅರಿವು ಮೂಡಿಸಲು ರಾಜ್ಯ ಸರ್ಕಾರದ ವತಿಯಿಂದ "ಸಂವಿಧಾನ ಜಾಗೃತಿ ಜಾಥಾ"ವನ್ನು ರಾಜ್ಯಾದ್ಯಂತ ಹಮ್ಮಿಕೊಂಡಿದ್ದು, ಬಳ್ಳಾರಿ ಜಿಲ್ಲೆಯಲ್ಲಿ ಯಶಸ್ವಿಯಾಗಿ ಸಂಚರಿಸುತ್ತಿದೆ ಮತ್ತು ಸಾರ್ವಜನಿಕ ವಲಯದಲ್ಲಿ ಉತ್ತಮ ಸ್ಪಂದನೆ ದೊರೆಯುತ್ತಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದರು.

ಜಿಲ್ಲೆಯಲ್ಲಿ ಸಂಚರಿಸುತ್ತಿರುವ "ಸಂವಿಧಾನ ಜಾಗೃತಿ ಜಾಥಾ" ಕುರಿತು, ಬುಧವಾರದಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಜ.26 ರ ಗಣರಾಜ್ಯೋತ್ಸವ ದಿನದಂದು ಯುವಜನ, ಕ್ರೀಡೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ನಾಗೇಂದ್ರ ಅವರು ಜಾಥಾಗೆ "ಸಂವಿಧಾನ ಜಾಗೃತಿ ಜಾಥಾ" ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದರು.

ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ಪ್ರದರ್ಶಿಸುವ ಎಲ್ಇಡಿ ಪರದೆ ಹೊಂದಿರುವ ಸ್ತಬ್ಧಚಿತ್ರವು ಜಿಲ್ಲೆಯ 100 ಗ್ರಾಮ ಪಂಚಾಯಿತಿ ಹಾಗೂ 08 ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಫೆ.23 ರವರೆಗೆ ಸಂಚರಿಸಲಿದ್ದು, ಈಗಾಗಲೇ ಫೆ.13 ರವರೆಗೆ 64 ಗ್ರಾಮ ಪಂಚಾಯಿತಿ ಮತ್ತು 04 ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ತನ್ನ ಸಂಚಾರ ಪೂರ್ಣಗೊಳಿಸಿದೆ ಎಂದು ಅವರು ತಿಳಿಸಿದರು.

ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವು ಪೂರ್ವ ನಿಗದಿತ ರೂಟ್ ಮ್ಯಾಪ್‌ನಂತೆ ಪ್ರತೀ ದಿನ ಸಂಚರಿಸುತ್ತಿದೆ.



ಈವರೆಗೆ ಬಳ್ಳಾರಿ, ಸಿರುಗುಪ್ಪ ಮತ್ತು ಕುರುಗೋಡು ತಾಲ್ಲೂಕಿನ 64 ಗ್ರಾಮ ಪಂಚಾಯಿತಿಗಳು ಮತ್ತು 04 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಂಚರಿಸಿ ಶೇ.73 ರಷ್ಟು ಸ್ಥಳಗಳಲ್ಲಿ ಸಂಚಾರವನ್ನು ಪೂರ್ಣಗೊಳಿಸಿದೆ ಎಂದರು.

ಜಾಥಾವು ಫೆ.14 ರಿಂದ ಕಂಪ್ಲಿ ಮತ್ತು ಸಂಡೂರು ತಾಲ್ಲೂಕಿನಾದ್ಯಂತ ಸಂಚರಿಸಿ ಫೆ.23 ರಂದು ಪೂರ್ಣಗೊಳ್ಳಲಿದೆ. ನಂತರ ಫೆ.24 ಮತ್ತು 25 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಜರುಗುವ "ಸಂವಿಧಾನ ಜಾಗೃತಿ ಜಾಥಾ" ಬೃಹತ್ ಸಮಾವೇಶದಲ್ಲಿ ಪಾಲ್ಗೊಳ್ಳುವ ಮುಖಾಂತರ ಕೊನೆಗೊಳ್ಳಲಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಜಾಥಾ ಸಂಚರಿಸುವ ಮಾರ್ಗದಲ್ಲಿ ಆಯಾ ಗ್ರಾಮ ಪಂಚಾಯತ್ ಮತ್ತು ನಗರ ಸ್ಥಳೀಯ ಸಂಸ್ಥೆಗಳ ವತಿಯಿಂದ ವಿಜೃಂಭಣೆಯಿಂದ ಸ್ತಬ್ಧಚಿತ್ರವನ್ನು ಸ್ವಾಗತಿಸಲಾಗುತ್ತಿದೆ. ಆಯಾ ಗ್ರಾಮ ಪಂಚಾಯತ್ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಮೇಯರ್, ಉಪ ಮೇಯರ್, ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು, ಜನ ಪ್ರತಿನಿಧಿಗಳು, ವಿವಿಧ ಸಂಘ ಸಂಸ್ಥೆಗಳ ಮುಖಂಡರುಗಳು, ಶಿಕ್ಷಕರುಗಳು, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸೇರಿದಂತೆ ವಿಶೇಷವಾಗಿ ಆಯಾ ತಾಲ್ಲೂಕಿನ ಶಾಸಕರುಗಳು ಕೂಡಾ ಅತ್ಯಂತ ಉತ್ಸುಕತೆಯಿಂದ ಭಾಗವಹಿಸುತ್ತಿದ್ದಾರೆ ಎಂದರು.

ಪ್ರತೀ ದಿನ, ಪ್ರತೀ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಕಳಶ ಮತ್ತು ಪೂರ್ಣಕುಂಭ ಹೊತ್ತ ಮಹಿಳೆಯರ ಮೂಲಕ ಸ್ತಬ್ಧಚಿತ್ರವನ್ನು ಸ್ವಾಗತಿಸಲಾಗುತ್ತಿದ್ದು, ಸ್ತಬ್ಧಚಿತ್ರದಲ್ಲಿ ಪ್ರದರ್ಶಿಸಲಾಗಿರುವ ಸಂವಿಧಾನದ ಮಹತ್ವ, ರಾಜ್ಯ ನಿರ್ದೇಶಕ ತತ್ವಗಳು, ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯಕ್ಕೆ ಸಂಬಂಧಿಸಿದಂತೆ ಡಾ.ಬಿ.ಆರ್.ಅಂಬೇಡ್ಕರ್‌ರವರ ಪರಿಕಲ್ಪನೆ, ಬಸವಣ್ಣನವರ ವಚನಗಳು ಹಾಗೂ ಮಹನೀಯರ ನುಡಿಮುತ್ತುಗಳನ್ನು ಜನರು ಕೌತುಕದಿಂದ ವೀಕ್ಷಿಸಿ ಸಂವಿಧಾನದ ಮೌಲ್ಯ ಹಾಗೂ ಆಶಯಗಳ ಕುರಿತು ತಿಳಿದುಕೊಳ್ಳುತ್ತಿದ್ದಾರೆ. ಜಾಥಾದ ಉದ್ದಕ್ಕೂ "ಸಂವಿಧಾನದ ಆತ್ಮ" ಆಗಿರುವ ಸಂವಿಧಾನದ ಪ್ರಸ್ತಾವನೆಯ ಪ್ರತಿಯನ್ನು ಹಂಚಿಕೆ ಮಾಡಲಾಗುತ್ತಿದೆ ಎಂದರು.

ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮದ ಅಂಗವಾಗಿ ಜಿಲ್ಲೆಯಲ್ಲಿ ವಿಶಿಷ್ಟವಾಗಿ ವಿನೂತನ ಮಾದರಿಯಲ್ಲಿ "ಐತಿಹಾಸಿಕ ಬಳ್ಳಾರಿ ಬೆಟ್ಟದ ಕಡೆಗೆ ಸಂವಿಧಾನದ ನಡಿಗೆ" ಎಂಬ ಶೀರ್ಷಿಕೆಯಡಿ ಜಿಲ್ಲಾಡಳಿತದ ವತಿಯಿಂದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ರವರ ನೇತೃತ್ವದಲ್ಲಿ ಐತಿಹಾಸಿಕ ಬಳ್ಳಾರಿ ಬೆಟ್ಟದ ತುದಿಗೆ ವಿವಿಧ ಇಲಾಖೆಯ ಅಧಿಕಾರಿಗಳು, ಸಂಘ ಸಂಸ್ಥೆಗಳ ಮುಖಂಡರುಗಳು ಹಾಗೂ ವಿದ್ಯಾರ್ಥಿಗಳನ್ನೊಳಗೊಂಡಂತೆ ಕಾಲ್ನಡಿಗೆಯಲ್ಲಿ ತೆರಳಿ ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಲಾಗಿದೆ. ಈ ವಿಶಿಷ್ಟ ಕಾರ್ಯಕ್ರಮಕ್ಕೆ ರಾಜ್ಯ ಮಟ್ಟದಿಂದ ಪ್ರಶಂಸೆ ವ್ಯಕ್ತವಾಗಿದೆ ಎಂದು ಹೇಳಿದರು.

*ಫೆ.16 ರಂದು 'ಚಿತ್ರಕಲಾ ಪ್ರದರ್ಶನ':*

ಜಿಲ್ಲೆಯಲ್ಲಿ 'ಸಂವಿಧಾನ ಜಾಗೃತಿ ಜಾಥಾ' ಸಂಚಾರ ಹಿನ್ನಲೆಯಲ್ಲಿ ವಿವಿಧ ಶಾಲಾ–ಕಾಲೇಜು ವಿಭಾಗದಲ್ಲಿ ಏರ್ಪಡಿಸಿದ್ದ ಚಿತ್ರಕಲೆ ಸ್ಪರ್ಧೆಯಲ್ಲಿ ವಿಜೇತರ ಅತ್ಯುತ್ತಮ ಚಿತ್ರಗಳನ್ನು ಪ್ರದರ್ಶಿಸಲು ಇದೇ ಫೆ.16 ರಂದು ನಗರದ ವಾಲ್ಮೀಕಿ ಭವನದಲ್ಲಿ 'ಚಿತ್ರಕಲಾ ಪ್ರದರ್ಶನ' ಏರ್ಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದರು.

"ಸಂವಿಧಾನ ಜಾಗೃತಿ ಜಾಥಾ" ಕಾರ್ಯಕ್ರಮ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಅಪ್ಲೋಡ್ ಮಾಡಲಾದ ಛಾಯಾಚಿತ್ರ ಮತ್ತು ವೀಡಿಯೋಗಳನ್ನು ವೀಕ್ಷಿಸಿ ಲೈಕ್, ಶೇರ್ ಮತ್ತು ಕಾಮೆಂಟ್‌ಗಳ ಮೂಲಕ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಬಹುದು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಕೆ.ಹೆಚ್.ಸತೀಶ್ ಸೇರಿದಂತೆ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಮಕ್ಕಳ ಸಾಹಿತ್ಯ ಸಂಭ್ರಮಕ್ಕೆ ಚಾಲನೆ

■ ಹಂಪಿ ಟೈಮ್ಸ್ ಕೊಪ್ಪಳ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ, ಕೊಪ್ಪಳ ಜಿಲ್ಲಾ ಪಂಚಾಯತ, ತಾಲೂಕ ಪಂಚಾಯತ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಭಾರತ ಜ್ಞಾನ ವಿಜ್ಞಾನ ಸಮಿತಿ ಕರ್ನಾಟಕ ತಾಲೂಕ ಘಟಕ ಕೊಪ್ಪಳ, ಗಿಣಗೇರಿ, ಹಾಲವರ್ತಿ, ಗುಳದಳ್ಳಿ, ಬೇವಿನಹಳ್ಳಿ ಗ್ರಾಮ ಪಂಚಾಯತ ಸಂಯುಕ್ತಾಶ್ರಯದಲ್ಲಿ ಗಿಣಗೇರಿಯ ಮಣ್ಣು, ನೀರು ಮತ್ತು ಎಲೆ ವಿಶ್ಲೇಷಣಾ ಪ್ರಯೋಗಾಲಯ ಕೇಂದ್ರದಲ್ಲಿ ಫೆಬ್ರುವರಿ 14, 15, 16 ಮೂರು ದಿನಗಳ ಕಾಲ ಹಮ್ಮಿಕೊಳ್ಳಲಾದ ಕೊಪ್ಪಳ ತಾಲ್ಲೂಕ ಮಟ್ಟದ ಮಕ್ಕಳ ಸಾಹಿತ್ಯ ಸಂಭ್ರಮಕ್ಕೆ ಬುಧವಾರದಂದು ಅದ್ದೂರಿ ಚಾಲನೆ ನೀಡಲಾಯಿತು.

ಮಕ್ಕಳ ಸಾಹಿತ್ಯ ಸಂಭ್ರಮಕ್ಕೆ ಬಂದ ಮಕ್ಕಳನ್ನು ಅದ್ದೂರಿಯಾಗಿ, ಕಿರೀಟ ಹಾಕಿ, ಪುಷ್ಪ ನೀಡಿ ಮೆರವಣಿಗೆಯಲ್ಲಿ ಡೊಳ್ಳು ಬಾರಿಸುತ, ಹಾಡುಗಳನ್ನು ಹಾಡುತ್ತ ಬರಮಾಡಿಕೊಳ್ಳಲಾಯಿತು. ಮೆರವಣಿಗೆಗೆ ಗಿಣಗೇರಿ ಗ್ರಾಮ ಪಂಚಾಯತ ಅಧ್ಯಕ್ಷರಾದ ಲಕ್ಷ್ಮೀ ಮೂರಮನಿ ಡೊಳ್ಳು ಬಾರಿಸುವುದರೊಂದಿಗೆ ಚಾಲನೆ ನೀಡಿದರು.

ಕಾರ್ಯಕ್ರಮಕ್ಕೆ ಸಸಿಗೆ ನೀರು ಹಾಕುವುದರ ಮೂಲಕ ಉದ್ಘಾಟನೆ ಮಾಡಲಾಯಿತು.



ಉದ್ಘಾಟನೆ ಬಳಿಕ ಜಿಲ್ಲಾ ಪಂಚಾಯತ ಮುಖ್ಯ ಯೋಜನಾ ಅಧಿಕಾರಿ ಮಂಜುನಾಥ ಅವರು ಮಾತನಾಡಿ, ಮಕ್ಕಳಲ್ಲಿನ ಪ್ರತಿಭೆಗಳನ್ನು ಗುರುತಿಸಲು ಈ ತರಹದ ಶಿಬಿರಗಳು ಸಹಕಾರಿ. ನಿಮ್ಮಲ್ಲಿನ ಪ್ರತಿಭೆಗಳನ್ನು ಗುರುತಿಸಿ ಹೊರತೆಗೆಯುವ ಪ್ರಯತ್ನವನ್ನು ಸಂಪನ್ಮೂಲ ವ್ಯಕ್ತಿಗಳು ಮಾಡುತ್ತಾರೆ ಎಂದರು.

ಗಿಣಗೇರಿ ಗ್ರಾಮ ಪಂಚಾಯತ ಉಪಾಧ್ಯಕ್ಷರಾದ ಕರಿಯಪ್ಪ ಮೇಟಿ ಮಾತನಾಡಿ, ಮಕ್ಕಳು ಈ ಶಿಬಿರದ ಪ್ರಯೋಜನ ಪಡೆದುಕೊಂಡು, ಸಮಾಜದಲ್ಲಿ ಉತ್ತಮ ನಾಗರಿಕರಾಗಿ ಬದುಕಿ ಎಂದರು.

ಫಕೀರಪ್ಪ ಗುಳದಳ್ಳಿ ಪ್ರಾರ್ಥನೆಗೈದರು, ಹನುಮಂತಪ್ಪ ಕುರಿ ಸ್ವಾಗತಿಸಿದರು, ವಿರೇಶ ಮೇಟಿ ಪ್ರಾಸ್ತಾವಿಕ ಮಾತುಗಳನ್ನಾಡಿದರು. ಪ್ರಾಣೇಶ ಪೂಜಾರ ನಿರೂಪಿಸಿದರು, ಯಲ್ಲಪ್ಪ ವಂದಿಸಿದರು.

ಮೂರು ದಿನಗಳ ಕಾಲ ನಡೆಯಲಿರುವ ಮಕ್ಕಳ ಸಾಹಿತ್ಯ ಸಂಭ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ನಾಟಕ ವಿಭಾಗದಲ್ಲಿ ಲಕ್ಷ್ಮಣ ಪೀರಗಾರ, ಪ್ರಾಣೇಶ ಪೂಜಾರ, ರಾಮಣ್ಣ ಶ್ಯಾವಿ, ರಮೇಶ ಪೂಜಾರ, ಕವನ ವಿಭಾಗದಲ್ಲಿ ಶ್ರೀನಿವಾಸ ಚಿತ್ರಗಾರ, ಯಲ್ಲಪ್ಪ ಹರ್ನಾಳಗಿ, ಈರಪ್ಪ ಬಿಜಲಿ, ಶಂಕರ ಹರಟಿ, ಹನುಮಂತಪ್ಪ ಕುರಿ, ಕಥೆ ಕಟ್ಟೋಣ ವಿಭಾಗದಲ್ಲಿ ನಾಗರಾಜನಾಯಕ ಡೊಳ್ಳಿನ, ವಿಜಯಲಲಕ್ಷ್ಮೀ ಕೊಟಗಿ, ವಿರೇಶ ಮೇಟಿ, ದೀಪಾ, ನಾನು ರೀಪೋರ್ಟರ್ ವಿಭಾಗದಲ್ಲಿ ಮಂಜುನಾಥ, ವೀರಯ್ಯ, ಯಲ್ಲಪ್ಪ, ಫರೀದಾ ಅವರಿಂದ ಮಕ್ಕಳಿಗೆ ಮಾಹಿತಿ ನೀಡಲಿದ್ದಾರೆ.

# ವಸತಿ ನಿಲಯ ಕಟ್ಟಡ ಕಾಮಗಾರಿ ಅಪೂರ್ಣ: ಪ್ರತಿಕ್ರಿಯೆಗೆ ಸೂಚನೆ

■ ಹಂಪಿ ಟೈಮ್ಸ್ ರಾಯಚೂರು

ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯ ಪ್ರಾರಂಭಿಸಲು ಕೇಂದ್ರ ಸರ್ಕಾರದಿಂದ 1993 ರಲ್ಲಿ ಹಾಗೂ ರಾಜ್ಯ ಸರ್ಕಾರದಿಂದ 1995 ರಲ್ಲಿ ಅನುದಾನವನ್ನು ಕಟ್ಟಡ ನಿರ್ಮಾಣಕ್ಕಾಗಿ (ಜನತಾ ಟ್ರಸ್ಟ್) ರಾಯಚೂರುಗೆ ಬಿಡುಗಡೆ ಮಾಡಿದ್ದು, ಆದರೆ ಕಟ್ಟಡ ಕಾಮಗಾರಿಯು ಪೂರ್ಣಗೊಂಡಿರುವುದಿಲ್ಲ.

ಮಹಾಲೇಖಪಾಲರು ಆದೇಶ ಕೈಗೊಂಡಾಗ ಈ ಕುರಿತು ಆಕ್ಷೇಪಣೆ ಯಾಗಿರುತ್ತದೆ. ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯ ರಾಯಚೂರು ಕಟ್ಟಡ ಕಾಮಗಾರಿಯು ಅಪೂರ್ಣಗೊಂಡಿರುವ ಕುರಿತು ಆಕ್ಷೇಪಣೆ ಇರುವುದರಿಂದ ಜನಾತಾ ಟ್ರಸ್ಟ್‌ಗೆ ನೋಟಿಸ್‌ಗಳನ್ನು ಜಾರಿ ಮಾಡಿದರು ಯಾವುದೇ ಪ್ರತಿಕ್ರಿಯೆ ಬಂದಿರುವುದಿಲ್ಲ. ಹಾಗೂ ಪ್ರಧಾನ ಕಚೇರಿಯಿಂದ ನಿಮಗೆ ನೀಡಿದ ನೋಟಿಸ್, ಈ ಕಛೇರಿಯಿಂದ ನೊಂದಾಯಿತ ಅಂಚೆ ಮೂಲಕ ಜಾರಿ ಮಾಡಿಲಾಗಿದೆ.

ಆದರೂ ನೀವು ಯಾವುದೇ ರೀತಿಯ ಉತ್ತರ ನೀಡುತ್ತಿಲ್ಲ. ಈ ಪ್ರಕಟಣೆ ಅಧಿಕೃತ ಅಂತಿಮ ನೋಟಿಸ್ ಎಂದು ಪರಿಗಣಿಸಿ ಉಪ ನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇವರನ್ನು ಸಂಪರ್ಕಿಸಿ ಈ ಕಛೇರಿಯಿಂದ ನೀಡಿದ ನೋಟಿಸ್‌ಗಳಿಗೆ ಉತ್ತರಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ತಪ್ಪಿದಲ್ಲಿ ನಿಯಮನುಸಾರ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳು ಉಪ ನಿರ್ದೇಶಕರ ಕಛೇರಿ ಮಂತ್ರಾಲಯ ರೋಡ್ ಮಾವಿನ ಕೆರೆ ಎದುರುಗಡೆ ರಾಯಚೂರು ಇವರನ್ನು ಕಛೇರಿ ವೇಳೆಯಲ್ಲಿ ದೂರವಾಣಿ ಸಂಖ್ಯೆ: 08532–295646 ಸಂಪರ್ಕಿಸಲು ತಿಳಿಸಲಾಗಿದೆ.

# ಬೇಸಿಗೆ ಹಂಗಾಮಿನಲ್ಲಿ ಮಾವು ನಿರ್ವಹಣೆ

■ ಹಂಪಿ ಟೈಮ್ಸ್ ಕೊಪ್ಪಳ

ಬೇಸಿಗೆ ಹಂಗಾಮಿನಲ್ಲಿ ಮಾವು ನಿರ್ವಹಣೆಗಾಗಿ ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರವತಿಯಿಂದ ರೈತರಿಗೆ ಕೆಲವು ಸಲಹೆಗಳನ್ನು ನೀಡಲಾಗಿದೆ.

ಜಿಲ್ಲೆಯಾದ್ಯಂತ ಹಣ್ಣಿನ ರಾಜ ಮಾವು ಸುಮಾರು 3000 ಹೆಕ್ಟರ್ ಹೆಚ್ಚಿನ ಪ್ರದೇಶದಲ್ಲಿ ಬೆಳೆಯಲಾಗುತ್ತಿದೆ. ಜಿಲ್ಲೆಯಲ್ಲಿ 12ಕ್ಕೂ ಹೆಚ್ಚಿನ ಮಾವಿನ ತಳಿಗಳನ್ನು ಬೆಳೆಯಲಾಗುತ್ತಿದ್ದು, ಇದರಲ್ಲಿ ಬೆನೆಶಾನ್ ನಂತರ ಕೇಸರ ತಳಿ ತುಂಬಾ ಬೇಡಿಕೆ ಇರುವ ಪರಿಮಳವುಳ್ಳ ತಳಿಯಾಗಿದೆ. ಕೊಪ್ಪಳ ಕೇಸರ ಎಂದೇ ಖ್ಯಾತಿ ಹೊಂದಿದ ಈ ತಳಿಗೆ ರಾಜ್ಯದ ತುಂಬೆಲ್ಲಾ ಬೇಡಿಕೆ ಇದೆ.

ಈ ವರ್ಷ ಮಳೆ ಕಮ್ಮಿಯಿದ್ದರೂ, ಬೆಳಗಿನ ತೇವಾಂಶ ಹಾಗೂ ಆರ್ದ್ರತೆಯಿಂದಾಗಿ ಹೂವು ಮತ್ತು ಕಾಯಿ ಕಚ್ಚುವುದು ತುಂಬ ತಡವಾಗಿದೆ. ಈಗ ಶೇ. 70ಕ್ಕೂ ಹೆಚ್ಚಿನ ಪ್ರಮಾಣದಲ್ಲಿ ಹೂವು ಮತ್ತು ಹೀಚುಗಳು ಕಾಣಸಿಕೊಂಡಿವೆ. ಈ ಹಂತದಲ್ಲಿ ಕೀಟ ಮತ್ತು ರೋಗಗಳ ಬಾಧೆ ಅಲ್ಲದೇ ಹೂವು ಉದುರುವಿಕೆ ಹೆಚ್ಚಿನ ಪ್ರಮಾಣದಲ್ಲಿ ಕಂಡುಬಂದಿರುವ ಹಿನ್ನೆಲೆಯಲ್ಲಿ ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದ ವಿಜ್ಞಾನಿಗಳು ಇತ್ತೀಚೆಗೆ ಕೆಲ ಮಾವಿನ ತೋಟಗಳಿಗೆ ಭೇಟಿ ನೀಡಿ, ಬೇಸಿಗೆ ಹಂಗಾಮಿನಲ್ಲಿ ನಿರ್ವಹಣಾ ಕ್ರಮಗಳ ಕುರಿತಾಗಿ ಈ ಸಲಹೆಗಳನ್ನು ನೀಡಿದ್ದಾರೆ.

ಇದರಿಂದಾಗಿ ಹೂವು ಕಾಯಿ ಉದುರುವುದನ್ನು ತಡೆಗಟ್ಟಬಹುದು. ಇರುವೆಗಳು ಹಾಗೂ ಗೆದ್ದಲುಗಳ ನಿಯಂತ್ರಣ ಮಾಡಬೇಕು. ಗಿಡದ ಬಡ್ಡೆಗೆ ನೆಲದಿಂದ ಮೇಲಕ್ಕೆ ಮೂರು ಅಡಿಯಷ್ಟು ಸುತ್ತಲೂ ಸಿ.ಓ.ಸಿ. ಪುಡಿ ಅಥವಾ ಬೋರ್ಡೋ ಪುಡಿ ಅಥವಾ ಸುಣ್ಣವನ್ನು ಲೇಪನ ಮಾಡಬೇಕು. ಹೂವು, ಕಾಯಿ 40:60 ಅನುಪಾತದಲ್ಲಿದ್ದರೇ ರೋಗ, ಕೀಟಗಳ ಹತೋಟಿ



ಮತ್ತು ಪೋಷಕಾಂಶಗಳ ನಿರ್ವಹಣೆಗಾಗಿ ರೈತರು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ಸಿಂಪರಣೆ ಮಾಡುವಾಗ ನೀರಿನ ಪ್ರಮಾಣ ಹೆಚ್ಚಾಗಿರಬೇಕು. ದೊಡ್ಡ ಗಿಡಗಳಿಗೆ 8 ರಿಂದ 10 ಲೀಟರ್ ದ್ರಾವಣ ಸಿಂಪಡಿಸಬೇಕು.

ಮಾವಿನ ಬೆಳೆಯಲ್ಲಿ ಕಂಡುಬರುವ ಪ್ರಮುಖ ಕೀಟಗಳು ಮತ್ತು ಕೀಟಗಳ ನಿಯಂತ್ರಣಕ್ಕೆ ರೈತರು ಅನುಸರಿಸಬೇಕಾದ ಕ್ರಮಗಳ ವಿವರ ಇಂತಿವೆ.

ಜಿಗಿಹುಳು: ತಂಪುವಾತಾವರಣ ಹಾಗೂ ಆಗಾಗ ಮೋಡ ಕವಿದ ವಾತಾವರಣದಿಂದಾಗಿ ಜಿಗಿಹುಳುವಿನ ಬಾಧೆ ಕಂಡು ಬಂದಿರುತ್ತದೆ. ಇದರ ನಿಯಂತ್ರಣಕ್ಕೆ ಉತ್ತಮ ಗಾಳಿ ಮತ್ತು ಬೆಳಕು ಆಡುವಂತೆ ಗಿಡಗಳ ನಿರ್ವಹಣೆ ಮಾಡಬೇಕು ಮತ್ತು ತಿಳಿಸಿದಂತೆ ಸಿಂಪರಣೆ ಕೈಗೊಳ್ಳಬೇಕು. ಬೇವಿನ ಎಣ್ಣೆ 10000 ಪಿ.ಪಿ.ಎಂ. 2 ಮಿಲಿ ಅಥವಾ ಇಮಿಡಾಕ್ಲೋಪ್ರಿಡ್ 17.8 ಇ.ಸಿ. 0.5 ಮಿಲಿ ಅಥವಾ ಲ್ಯಾಂಬ್ಡಾ ಸಿಯಾಲೋಥ್ರಿನ್ 5 ಇ.ಸಿ. ಅಥವಾ ಬಿಪ್ರೋಫೆಜಿನ್ 25 ಎಸ್.ಸಿ. 1 ಮಿಲಿ ಜೊತೆಗೆ ಅಸಿಫೇಟ್ 75 ಎಸ..ಪಿ. ಪುಡಿಯನ್ನು ಒಂದು ಗ್ರಾಂ. ಒಂದು ಲೀಟರಗೆ ಬೆರೆಸಿ ಸಿಂಪರಿಸಬೇಕು. ಹಳದಿ ಅಂಟುಕಾರ್ಡುಗಳನ್ನು ಅಳವಡಿಸಬೇಕು.

ಹಿಟ್ಟು ತಿಗಣೆ: ಈ ಕೀಟದ ಹತೋಟಿಗಾಗಿ ಇರುವೆಗಳನ್ನು ಇರದಂತೆ ನೋಡಿಕೊಳ್ಳಬೇಕು. ಎರಡನೇಯದಾಗಿ ಬೇವಿನ ಎಣ್ಣೆ ಜೊತೆಗೆ ಮೀನಿನೆಣ್ಣೆ 2 ಮಿಲಿ ಅಥವಾ ರಾಸಾಯನಿಕಗಳಾದ ಕ್ಲೋರೋಪೈರಿಫಾಸ್ 20 ಇ.ಸಿ. 2 ಮಿಲಿ ಒಂದು ಲೀಟರ ನೀರಿಗೆ ಬೆರೆಸಿ ಜೊತೆಗೆ ಶ್ಯಾಂಪೂ ಮಿಶ್ರ ಮಾಡಿ ಸಿಂಪರಿಸಬೇಕು.

ಗೂಡು ಕಟ್ಟುವ ಕೀಡೆ ಅಥವಾ ಬಾರುಹುಳು: ಕಂಡುಬಂದಲ್ಲಿ ಇಮ್ಯಾಮೆಕ್ಟಿನ್ ಬೆಂಜೋಯೇಟ್ 5 ಎಸ್.ಜಿ. 0.4 ಮಿಲಿ ಅಥವಾ ಕ್ವಿನಾಲಫಾಸ್ 25 ಇ.ಸಿ. 2 ಮಿಲಿ 1 ಲೀಟರ ನೀರಿಗೆ ಬೆರೆಸಿ ಸಿಂಪರಿಸಬೇಕು.

ಮುಂದೆ ಬರಬಹುದಾದ ಹಣ್ಣಿನ ನೊಣ ಕೀಟದ ಹತೋಟಿಗಾಗಿ ಈಗಲೇ ಎಕರೆಗೆ 6–10 ರಂತೆ ಮೋಹಕ ಬಲೆಗಳನ್ನು ಅಳವಡಿಸಬೇಕು. ತೋಟದಲ್ಲಿ ಅಲ್ಲಲ್ಲಿ ಎಕರೆಗೆ 1 ರಂತೆ ದೀಪಾಕರ್ಷಕ ಬಲೆಗಳನ್ನು ಅಳವಡಿಸಬೇಕು.

ಪ್ರಮುಖ ರೋಗಗಳು: ಮಾವಿನ ಬೆಳೆಯಲ್ಲಿ ಕಂಡುಬರುವ ಪ್ರಮುಖ ರೋಗವಾದ 'ಬೂದಿ ರೋಗ'ದ ನಿಯಂತ್ರಣಕ್ಕಾಗಿ ಹುಳಿಮಜ್ಜಿಗೆ ಅಥವಾ ಅಡುಗೆ ಸೋಡಾ 2–3 ಗ್ರಾಂ. ಅಥವಾ ಹೆಕ್ಸಾಕೋನಾಜೋಲ್ 5% ಎಸ್.ಸಿ. 1 ಮಿಲಿ ಅಥವಾ ಸಿಸ್ಥೇನ್ 20% ಇ.ಡಬ್ಲ್ಯೂ ಪುಡಿ 2 ಗ್ರಾಂ. 1 ಲೀಟರ ನೀರಿಗೆ ಬೆರೆಸಿ ಸಿಂಪರಿಸಬೇಕು.

ಇನ್ನೊಂದು ಪ್ರಮುಖ ರೋಗವಾದ 'ಚಿಬ್ಬುರೋಗ'ದ ಹತೋಟಿಗೆ ಕಾರ್ಬನ್‌ಡೇಜಿಮ್ 50 ಡಬ್ಲ್ಯೂ.ಪಿ 1 ಗ್ರಾಂ. ಅಥವಾ ಥಯೋಫಿನೈಟ್ ಮಿಥೈಲ್ 70 ಡಬ್ಲ್ಯೂ.ಪಿ 1 ಗ್ರಾಂ. ಅಥವಾ ಫಾಲಿಕ್ಯೂರ್ 250 ಇ.ಸಿ. 1 ಮಿಲಿ 1 ಲೀಟರ ನೀರಿಗೆ ಸಿಂಪರಿಸಬೇಕು.

ಸೂಚನೆ: ಹೂವು ಜಾಸ್ತಿ ಇದ್ದಾಗ ಸಿಂಪರಣೆ ಮಾಡಬಾರದು ಮತ್ತು ಅತೀ ಮುಖ್ಯವಾಗಿ ಗಂಧಕ ಮತ್ತು ಗಂಧಕಯುಕ್ತ ಪದಾರ್ಥಗಳನ್ನು ಸಿಂಪಡಿಸಬಾರದು. ಮಾವು ಅತ್ಯಂತ ಉಪಕಾರಿ ಬಹುವಾರ್ಷಿಕ ಹಣ್ಣಿನ ಬೆಳೆಯಾಗಿದ್ದು, ಅನೇಕ ಪರಭಕ್ಷಕ ಕೀಟಗಳು ಹಾಗೂ ಜೇನು ನೊಣದಂತಹ ಉಪಕಾರಿ ಕೀಟಗಳಿಗೆ ಆಶ್ರಯ ನೀಡುತ್ತದಾದ್ದರಿಂದ ಅನಾವಶ್ಯಕವಾಗಿ ಮತ್ತು ಹಾನಿಕಾರಕ ರಾಸಾಯನಿಕಗಳ ಸಿಂಪರಣೆ ಮಾಡಬಾರದು.

ಉತ್ತಮ ಪೋಷಣೆಗಾಗಿ ಮಾವು ಸ್ಪೇಷಲ್, ಜೀವಾಮೃತ, ಗೋಕೃಪಾಮೃತ ಅಲ್ಲದೇ ದ್ರವರೂಪದ ಗೊಬ್ಬರಗಳನ್ನು 15 ದಿನಗಳಿಗೊಮ್ಮೆ ಅಗತ್ಯವಿದ್ದಲ್ಲಿ ಸೂಕ್ತ ಪೀಡೆನಾಶಕಗಳೊಂದಿಗೆ ಬೆರೆಸಿ ಸಿಂಪರಿಸಬೇಕು ಅಥವಾ ಹನಿ ನೀರಾವರಿ ಮೂಲಕ ವಾರಕ್ಕೊಮ್ಮೆ ನೀಡಬೇಕು. ಮಾವು ಸ್ಪೆಷಲ್ ಕೇವಲ ಸಿಂಪರಣೆಗಾಗಿ ಉಪಯೋಗಿಸಬಹುದು. ಹೆಚ್ಚಿನ ಮಾಹಿತಿಗಾಗಿ ವಿಸ್ತರಣಾ ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದ ಮುಂದಾಳುಗಳಾದ ಡಾ ಎಂ.ವಿ.ರವಿ., (ಮೊ.ಸಂಖ್ಯೆ 9480247745) ಹಾಗೂ ಸಹಾಯಕ ಪ್ರಾಧ್ಯಾಪಕರಾದ ವಾಮನಮೂರ್ತಿ (ಮೊ.ಸಂಖ್ಯೆ 9482672039) ಇವರನ್ನು ಸಂಪರ್ಕಿಸಬಹುದು.

• Admissions
• Requirements
• Firm Branding
• Public Notice
• Change of Name

BOOK NOW!

Booking Open for Your Advertisements in Leading Local, State & National News Papers
9482599089 / 9448633038

• Obituary
• Remembrance
• Birthday wish ads
• Events Display &
• Classified ads

SHUBHA Ads C/o HAMPI TIMES, Bamboo Bazaar, Nr Valmiki Circle, Hosapete-583201 Vijayanagara Dist.

# ಸರ್ಕಾರವು ಕ್ರಮ ಕೈಗೊಂಡಿದೆಯೇ?

## ಕಂದಾಯ ಸಚಿವ ಕೃಷ್ಣ ಭೈರೇಗೌಡ ಹೇಳಿಕೆ | 33.09 ಲಕ್ಷ ರೈತರಿಗೆ, 628.03 ಕೋಟಿ ಮೊದಲನೆಯ ಕಂತಾಗಿ ತಲಾ 2 ಸಾವಿರ ನೀಡಲಾಗಿದೆ

**ಹಂಪಿ ಟೈಮ್ಸ್ ಬಳ್ಳಾರಿ**

ಕರ್ನಾಟಕದಲ್ಲಿ ಬರ ಪೀಡಿತ 223 ತಾಲೂಕಿನ 7082 ಗ್ರಾಮಗಳಲ್ಲಿ ಮತ್ತು 1193 ವಾರ್ಡ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಲಿದೆ ಎಂದು ಕರ್ನಾಟಕ ಸರ್ಕಾರ ಗುರುತಿಸಿದ್ದು, ಕೇಂದ್ರ ಸರ್ಕಾರದ ಎನ್‌ಡಿಆರ್‌ಎಫ್ ಅನುದಾನವನ್ನು ನಿರೀಕ್ಷಿಸಿ ರಾಜ್ಯ ವಿಪತ್ತು ಪರಿಹಾರ ನಿಧಿಯಿಂದ 33.09 ಲಕ್ಷ ರೈತರಿಗೆ ಅರ್ಹತೆಗೆ ಅನುಗುಣವಾಗಿ 628.03 ಕೋಟಿ ರೂಪಾಯಿಗಳನ್ನು ಮೊದಲನೆಯ ಕಂತಾಗಿ ತಲಾ 2 ಸಾವಿರ ರೂಪಾಯಿ ಬೆಳೆ ನಷ್ಟ ಪರಿಹಾರವನ್ನು ಬಿಡಗಡೆ ಮಾಡಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಅವರು ತಿಳಿಸಿದ್ದಾರೆ.

ಬಳ್ಳಾರಿ – ವಿಜಯನಗರ ಸ್ಥಳೀಯ ಸಂಸ್ಥೆಗಳ ವಿಧಾನಪರಿಷತ್ ಸದಸ್ಯ ವೈ.ಎಂ. ಸತೀಶ್ ಅವರು ವಿಧಾನ ಪರಿಷತ್ತಿನಲ್ಲಿ ಬುಧವಾರ ಕೇಳಿದ, ಬರ ಪರಿಹಾರ ಮತ್ತು ಗುಳೆ ನಿಯಂತ್ರಣಕ್ಕಾಗಿ

ಕರ್ನಾಟಕ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳ ಕುರಿತು ಕೇಳಿದ ಚುಕ್ಕಿ ಗುರುತಿನ ಪ್ರಶ್ನೆಗೆ ಕೃಷಿ ಸಚಿವ ಕೃಷ್ಣ ಭೈರೇಗೌಡ ಅವರು ಸುದೀರ್ಘ ಉತ್ತರ ನೀಡಿದ್ದಾರೆ.

ರಾಜ್ಯದ 46 ಗ್ರಾಮಗಳಿಗೆ 60 ಟ್ಯಾಂಕರ್‌ಗಳ ಮೂಲಕ, 156 ಗ್ರಾಮಗಳಿಗೆ 183 ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಪಡೆಯುವ ಮೂಲಕ, 4 ನಗರ ಸಂಸ್ಥೆಗಳ 46 ವಾರ್ಡ್‌ಗಳಲ್ಲಿ 12 ಟ್ಯಾಂಕರ್‌ಗಳ



ಕುಡಿಯುವ ನೀರನ್ನು ಪೂರೈಕೆ ಮಾಡಲಾಗುತ್ತಿದೆ. ಮುಂಜಾಗ್ರತಾ ಕ್ರಮವಾಗಿ ರಾಜ್ಯಾದ್ಯಂತ 6416 ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಿ, 2654 ಬೋರ್‌ವೆಲ್ ಮಾಲೀಕರ ಜೊತೆ ಒಪ್ಪಂದ ಮಾಡಿಕೊಳ್ಳಲಾಗಿದೆ. 26 ಜಿಲ್ಲೆಗಳಲ್ಲಿ ಈ ಪ್ರಕ್ರಿಯೆ ಚಾಲ್ತಿಯಲ್ಲಿದೆ ಎಂದು ವಿವರಿಸಿದ್ದಾರೆ.

ಗ್ರಾಮೀಣರು ಗುಳೆ ಹೋಗುವುದನ್ನು ತಪ್ಪಿಸಲಿಕ್ಕಾಗಿ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಪ್ರತಿ ಕುಟುಂಬಕ್ಕೆ 100 ರಿಂದ 150 ದಿನಗಳಿಗೆ ಮಾನವ ದಿನಗಳಿಗೆ ಹೆಚ್ಚಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಬರದ ಹಿನ್ನಲೆಯಲ್ಲಿ 17.59 ಲಕ್ಷ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಇದರಲ್ಲಿ 7.62 ಲಕ್ಷ ಕಾಮಗಾರಿಗಳನ್ನು ಕೃಷಿ ಮತ್ತು ಇತರೆ ಚಟುವಟಿಕೆಗಳಿಗೆ ಮೀಸಲು ಮಾಡಲಾಗಿದೆ. ಮೇವಿನ ಬ್ಯಾಂಕ್, ಕುಡಿಯುವ ನೀರು, ಗೋಶಾಲೆ ಇನ್ನಿತರೆ ತುರ್ತು ಕಾರ್ಯಗಳನ್ನು ಕೈಗೊಳ್ಳಲು 31 ಜಿಲ್ಲೆಗಳಿಗೆ 324 ಕೋಟಿ ರೂಪಾಯಿ ಬಿಡುಗಡೆ ಮಾಡಲಾಗಿದ್ದು, ಈ ಪೈಕಿ ಡಿಸಿಗಳು ಮತ್ತು ತಹಸೀಲ್ದಾರರ ಬಳಿ ಪ್ರಸ್ತುತ ಒಟ್ಟು 867.82 ಕೋಟಿ ರೂಪಾಯಿ ಅನುದಾನ ಲಭ್ಯವಿದೆ ಎಂದರು.

ಬಳ್ಳಾರಿ ಜಿಲ್ಲೆಯ 5, ವಿಜಯನಗರ ಜಿಲ್ಲೆಯ 6 ತಾಲೂಕುಗಳನ್ನು 'ಬರ ಪೀಡಿತ' ಎಂದು ಘೋಷಣೆ ಮಾಡಲಾಗಿದೆ. ಈ ಅವಳಿ ಜಿಲ್ಲೆಗಳಲ್ಲಿ ಕುಡಿಯುವ ನೀರು, ಮೇವುಬ್ಯಾಂಕ್ ಮತ್ತು ತುರ್ತು ಅಗತ್ಯಗಳಿಗಾಗಿ ಒಟ್ಟು 1650 ಲಕ್ಷ ರೂಪಾಯಿಗಳನ್ನು ಬಿಡಗಡೆ ಮಾಡಲಾಗಿದೆ. ಬಳ್ಳಾರಿ ಡಿಸಿ ಬಳಿ 700 ಲಕ್ಷ ರೂ, ವಿಜಯನಗರ ಡಿಸಿ ಬಳಿ 900 ಲಕ್ಷ ರೂಪಾಯಿ ಇದೆ. ಬಳ್ಳಾರಿ ಡಿಸಿಯ ಬಳಿ 29.93 ಕೋಟಿ ರೂ, ಜಿಲ್ಲೆಯ ಐವರು ತಹಸೀಲ್ದಾರರ ಬಳಿ ಒಟ್ಟು 2.11 ಕೋಟಿ ರೂಪಾಯಿ ಸೇರಿ ಒಟ್ಟು 32.04 ಕೋಟಿ ರೂಪಾಯಿ ಪಿಡಿ ಖಾತೆಯಲ್ಲಿದೆ. ವಿಜಯನಗರ ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ 21.42 ಕೋಟಿ ರೂ, ಆರು ತಹಸೀಲ್ದಾರರ ಪಿಡಿ ಖಾತೆಯಲ್ಲಿ ಒಟ್ಟು 2.88 ಕೋಟಿ ರೂಪಾಯಿ ಸೇರಿ ಒಟು 24.30 ಕೋಟಿ ರೂಪಾಯಿ ಇದೆ ಎಂದರು.

ಬಳ್ಳಾರಿಯ ಸಂಡೂರುನ 8 ಗ್ರಾಮಗಳಿಗೆ ಖಾಸಗಿ ಬೋರ್‌ವೆಲ್ ಮೂಲಕ, ಹರಗಿನಡೋಣಿಗೆ ಸರ್ಕಾರಿ ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. ಜಿಲ್ಲೆಯ 114 ಗ್ರಾಮಗಳನ್ನು ಮತ್ತು 97 ವಾರ್ಡ್‌ಗಳನ್ನು ಗುರುತಿಸಲಾಗಿದೆ. ವಿಜಯನಗರದ 473 ಗ್ರಾಮಗಳು, 46 ವಾರ್ಡ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗಲಿದ್ದು, ಖಾಸಗಿ ಬೋರ್‌ವೆಲ್ ಮೂಲಕನೀರು ಪೂರೈಸಲು ಅಗತ್ಯಕ್ರಮಕೈಗೊಳ್ಳಲಾಗಿದೆ ಎಂದರು.

ಬಳ್ಳಾರಿ ಜಿಲ್ಲೆಯ 35,099 ರೈತರಿಗೆ 6.90 ಕೋಟಿ ರೂಪಾಯಿ ಮತ್ತು ವಿಜಯನಗರ ಜಿಲ್ಲೆಯ 1,17,,267 ರೈತರಿಗೆ ಬೆಳೆ ಪರಿಹಾರದ ಮೊದಲ ಕಂತಾಗಿ 23.12 ಕೋಟಿ ರೂಪಾಯಿಗಳನ್ನು ಆಧಾರ್ ಜೋಡಣೆಯಾದ ಬ್ಯಂಕ್ ಖಾತೆಗಳಿಗೆ ನೇರವಾಗಿ ವರ್ಗಾವಣೆ ಮಾಡಲಾಗಿದೆ. ಟಾಸ್ಕ್‌ಫೋರ್ಸ್‌ಗಳನ್ನು ರಚಿಸಲಾಗಿದೆ. ಅಗತ್ಯಕ್ಕೆ ಅನುಗುಣವಾಗಿ ಅಧಿಕಾರಿಗಳು ಮತ್ತು ಟಾಸ್ಕ್‌ಫೋರ್ಸ್ ತಂಡಗಳು ನಿರಂತರ ಸಭೆ ನಡೆಸುತ್ತಿವೆ ಎಂದು ಅವರು ವಿವರಿಸಿದರು.

ಮೈಕ್ರೋ ನ್ಯೂಸ್

## ಫೆ.16 ಕ್ಕೆ ಸಾರ್ವಜನಿಕ ಕುಂದುಕೊರತೆಗಳ ಅಹವಾಲು ಸ್ವೀಕಾರ

**ಹಂಪಿ ಟೈಮ್ಸ್ ಕೊಪ್ಪಳ**

ಕರ್ನಾಟಕ ಲೋಕಾಯುಕ್ತ ಕೊಪ್ಪಳ ಕಚೇರಿಯಿಂದ ಸಾರ್ವಜನಿಕ ಕುಂದುಕೊರತೆಗಳ ಅಹವಾಲು ಸ್ವೀಕರಿಸುವ ಕಾರ್ಯಕ್ರಮ ಹಾಗೂ ತಾಲ್ಲೂಕ ಮಟ್ಟದ ಅಧಿಕಾರಿಗಳ ಸಭೆಯನ್ನು ಫೆಬ್ರವರಿ 16ರಂದು ಬೆಳಿಗ್ಗೆ 11 ಗಂಟೆಗೆ ನಗರದ ತಾಲ್ಲೂಕ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ಲೋಕಾಯುಕ್ತ ಬೆಂಗಳೂರು ರವರ ಆದೇಶದ ಮೇರೆಗೆ ಕೊಪ್ಪಳ ತಾಲ್ಲೂಕಿನಲ್ಲಿ ಸಾರ್ವಜನಿಕರಲ್ಲಿ ಯಾರಿಗಾದರೂ ಸರ್ಕಾರಿ ಅಧಿಕಾರಿಗಳಿಂದ ಆಗಬೇಕಾದ ಕೆಲಸಗಳಲ್ಲಿ ವಿಳಂಬವಾಗಿದ್ದರೆ ಅಥವಾ ಅಧಿಕಾರಿಗಳು ನ್ಯಾಯಯುತವಾಗಿ ಮಾಡಿ ಕೊಡಬೇಕಾದ ಕೆಲಸಗಳಲ್ಲಿ ವೃಥಾ ತೊಂದರೆ ಕೊಡುತ್ತಿದ್ದರೆ. ಲಂಚ ಕೇಳುವುದು ಇತ್ಯಾದಿ ದುರಾಡಳಿತದಲ್ಲಿ ತೊಡಗಿದ್ದರೆ, ಫೆ. 16 ರಂದು ಕೊಪ್ಪಳದಲ್ಲಿ ಸಾರ್ವಜನಿಕ ಕುಂದುಕೊರತೆಗಳ ಅಹವಾಲು ಸ್ವೀಕರಿಸುವ ಕಾರ್ಯಕ್ರಮವನ್ನು ಹಾಗೂ ತಾಲ್ಲೂಕ ಮಟ್ಟದ ಅಧಿಕಾರಿಗಳ ಸಭೆ ನಡೆಸುವುದನ್ನು ತೀರ್ಮಾನಿಸಲಾಗಿದೆ.

ಲೋಕಾಯುಕ್ತ ಅಧಿಕಾರಿಗಳು ಅಂದು ಎಲ್ಲಾ ಇಲಾಖೆಯ ತಾಲ್ಲೂಕ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದು, ಸಾರ್ವಜನಿಕರು ತಮ್ಮ ಕುಂದುಕೊರತೆಗಳನ್ನು ನೇರವಾಗಿ ಬಂದು ಸಲ್ಲಿಸಲು ಹಾಗೂ ಸ್ಥಳದಲ್ಲಿಯೇ ಇದ್ದ ಅಧಿಕಾರಿಗಳೊಂದಿಗೆ ಕೆಲಸ ನೆರವೇರಿಸಿಕೊಳ್ಳಲು ಅಥವಾ ಸ್ಥಳದಲ್ಲಿಯೇ ದೂರು ಅರ್ಜಿಯ ಫಾರಂ ನಂ: 1 & 2 ತೆಗೆದುಕೊಂಡು ದೂರು ನೀಡಲು ಅನುಕೂಲ ಕಲ್ಪಿಸಲಾಗಿದೆ. ಸಾರ್ವಜನಿಕರು ಈ ಸಭೆಯ ಉಪಯೋಗ ಪಡೆದುಕೊಳ್ಳಲು ಈ ಮೂಲಕ ತಿಳಿಸಲಾಗಿದೆ. ಈ ಕುರಿತು ಹೆಚ್ಚಿನ ಮಾಹಿತಿಗಾಗಿ ಮೊ ಸಂ: 9364062699 , 9364062700, 9364062701 ಮತ್ತು 9364062700 ಗಳನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ಲೋಕಾಯುಕ್ತ ಕೊಪ್ಪಳ ಪೊಲೀಸ್ ಉಪ–ಅಧೀಕ್ಷಕರು ತಿಳಿಸಿದ್ದಾರೆ.

## ಕೆ.ಎಂ.ಡಿ.ಸಿ: ಸ್ವಯಂ ಉದ್ಯೋಗ ಯೋಜನೆಯಡಿ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಕೊಪ್ಪಳ**

ಕರ್ನಾಟಕ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದಿಂದ 2023–24ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಸ್ವಯಂ ಉದ್ಯೋಗ ಯೋಜನೆಯಡಿ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಘಟಕ ವೆಚ್ಚದ ಶೇ.33 ಅಥವಾ ಗರಿಷ್ಠ ಮಿತಿ ರೂ.1 ಲಕ್ಷದ ಸಹಾಯಧನ ನೀಡಲಾಗುವುದು. ಯೋಜನೆಯಡಿ ಅರ್ಜಿ ಸಲ್ಲಿಸಲು ಅರ್ಜಿದಾರರು ಸರ್ಕಾರಿ ಆದೇಶದಲ್ಲಿ ವಿವರಿಸಿದಂತೆ ಧಾರ್ಮಿಕ ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು. ಅರ್ಜಿದಾರರ ವಯಸ್ಸು 18 ರಿಂದ 55 ವರ್ಷಗಳ ನಡುವೆ ಇರಬೇಕು. ಎಲ್ಲಾ ಮೂಲಗಳಿಂದ ಕುಟುಂಬದ ವಾರ್ಷಿಕ ಆದಾಯ ಗ್ರಾಮೀಣ ಪ್ರದೇಶದಲ್ಲಿ ರೂ. 81,000 ಹಾಗೂ ನಗರ ಪ್ರದೇಶದಲ್ಲಿ 1,03,000 ಗಿಂತ ಕಡಿಮೆ ಇರಬೇಕು. ಅರ್ಜಿದಾರರ ಕುಟುಂಬದ ಯಾವುದೇ ಸದಸ್ಯರು ಕೇಂದ್ರ, ರಾಜ್ಯ ಸರ್ಕಾರಿ ಅಥವಾ ಪಿ.ಎಸ್.ಯು ಉದ್ಯೋಗಿಯಾಗಿರಬಾರದು. ಅರ್ಜಿದಾರರು ಕೆ.ಎಂ.ಡಿ.ಸಿ.ಯಲ್ಲಿ ಸುಸ್ತಿದಾರರಾಗಿರಬಾರದು.

ಅರ್ಹ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಜಾತಿ/ ಅಲ್ಪಸಂಖ್ಯಾತ ಪ್ರಮಾಣಪತ್ರ, ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಆದಾಯ ಪ್ರಮಾಣಪತ್ರ, ಆಧಾರ್ ಕಾರ್ಡ್ ಪ್ರತಿ (ನಿವಾಸದ ಪುರಾವೆ), ಯೋಜನಾ ವರದಿಯೊಂದಿಗೆ ವೇಬ್‌ಸ್ಯೆಟ್: kmdconline.karnataka.gov.in ನಲ್ಲಿ ಆನ್‌ಲೈನ್ ಮೂಲಕ ಫೆಬ್ರವರಿ 29 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿಗೆ ಅಥವಾ ದೂರವಾಣಿ ಸಂಖ್ಯೆ: 08539–225008 ಗೆ ಸಂಪರ್ಕಿಸಬಹುದಾಗಿದೆ ಎಂದು ಕೊಪ್ಪಳ ಕೆ.ಎಂ.ಡಿ.ಸಿ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

## ಮೀನುಗಾರಿಕೆ ಇಲಾಖೆ: ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಬಳ್ಳಾರಿ**

ಮೀನುಗಾರಿಕೆ ಇಲಾಖೆ ವತಿಯಿಂದ 2023–24ನೇ ಸಾಲಿನ ಜಿಲ್ಲಾ ವಲಯ ವಿವಿಧ ಯೋಜನೆಗಳಡಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ ಯೋಜನೆಯಡಿ ಪರಿಶಿಷ್ಟ ಜಾತಿಯ ಮೀನು ಕೃಷಿಕರು ಮೀನು ಕೃಷಿ ಕೊಳ ನಿರ್ಮಾಣ ಮಾಡಲು 4.40 ಲಕ್ಷ ರೂ. ಹಣ (ಒಂದು ಹೆಕ್ಟೇರ್ ಕೊಳಕ್ಕೆ) ಸಹಾಯಧನ ನೀಡಲಾಗುತ್ತದೆ.

ಅರ್ಹ ಅರ್ಜಿದಾರರು ಅಗತ್ಯ ದಾಖಲೆಗಳೊಂದಿಗೆ https://ballari.nic.in/ ವೆಬ್‌ಸೈಟ್‌ಗೆ ಭೇಟಿ ನೀಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು ಹಾಗೂ ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲೂ ಅರ್ಜಿ ಸಲ್ಲಿಸಬಹುದಾಗಿದೆ.



ಅರ್ಜಿ ಸಲ್ಲಿಸಲು ಫೆ.20 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರ ಮೊ.8970754167 ಮತ್ತು ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕರ ಮೊ.9449593156 ಗೆ ಸಂಪರ್ಕಿಸಬೇಕೆಂದು ಎಂದು ಮೀನುಗಾರಿಕೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ.16ಕ್ಕೆ ಶ್ರೀ ಸವಿತಾ ಮಹರ್ಷಿ ಜಯಂತಿ

**ಹಂಪಿ ಟೈಮ್ಸ್ ಕೊಪ್ಪಳ**

ಸರ್ಕಾರದ ಆದೇಶದಂತೆ ಪ್ರಸಕ್ತ ಸಾಲಿನ ಜಿಲ್ಲಾ ಮಟ್ಟದ "ಶ್ರೀ ಸವಿತಾ ಮಹರ್ಷಿ" ಜಯಂತಿಯನ್ನು ಫೆಬ್ರವರಿ 16ರಂದು ಹಮ್ಮಿಕೊಳ್ಳಲಾಗಿದೆ.

ಎಲ್ಲಾ ಇಲಾಖೆಗಳು ತಮ್ಮ ಕಾರ್ಯಾಲಯದಲ್ಲಿ ಹಾಗೂ ತಮ್ಮ ಅಧೀನ ಕಾರ್ಯಾಲಯಗಳಲ್ಲಿಯೂ ಫೆ.16ಕ್ಕೆ ಶ್ರೀ ಸಮಿತಾ ಮಹರ್ಷಿ ಜಯಂತಿಯನ್ನು ಆಚರಿಸಬೇಕು ಮತ್ತು ಅಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾದ ಜಿಲ್ಲಾ ಮಟ್ಟದ ಜಯಂತಿ ಪೂಜಾ ಕಾರ್ಯಕ್ರಮದಲ್ಲಿ ಎಲ್ಲಾ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ಕಡ್ಡಾಯವಾಗಿ ಸರಿಯಾದ ಸಮಯಕ್ಕೆ ಭಾಗವಹಿಸಬೇಕೆಂದು ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ ತಿಳಿಸಿದ್ದಾರೆ.

## ವಾರ್ತಾ ಇಲಾಖೆಯ ಬೀದಿನಾಟಕ ಜನಪದ ಸಂಗೀತ ಕಾರ್ಯಕ್ರಮ




**ಹಂಪಿ ಟೈಮ್ಸ್ ಹೊಸಪೇಟೆ**

ಸರ್ಕಾರದ ಯೋಜನೆಗಳು ಮತ್ತು ಕಾರ್ಯಕ್ರಮಗಳ ಕುರಿತಂತೆ ಪ್ರಚಾರ ಕೈಗೊಳ್ಳಲು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ವಿಜಯನಗರ ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾದ ಬೀದಿನಾಟಕ ಮತ್ತು ಜನಪದ ಸಂಗೀತ ಕಾರ್ಯಕ್ರಮಕ್ಕೆ ಅಪರ ಜಿಲ್ಲಾಧಿಕಾರಿಗಳಾದ ಅನುರಾದ ಜಿ ಅವರುಜಿಲ್ಲಾಡಳಿತ ಭವನದ ಆವರಣದಲ್ಲಿ ಬುಧವಾರ ತಮಟೆ ಬಾರಿಸುವುದರ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ದಲಿಂಗೇಶ ರಂಗಣ್ಣನವರ, ಮತ್ತು ವಾರ್ತಾ ಇಲಾಖೆಯ ಪ್ರಥಮ ದರ್ಜೆ ಸಹಾಯಕರಾದ ರಾಮಾಂಜನೇಯ ಸೇರಿದಂತೆ ಜನನಿ ಪುಷ್ಪಕಲಾ ಯುವಕ ಸಂಘ ಹಾಗೂ ರಂಗಲೋಕಿ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಕಲಾವಿದರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ವಾರ್ತಾ ಇಲಾಖೆಯ 2023–24ನೇ ಸಾಲಿನ ಬೀದಿನಾಟಕ ಮತ್ತು ಜನಪದ ಸಂಗೀತ ಕಾರ್ಯಕ್ರಮವು ಜನನಿ ಪುಷ್ಪಕಲಾ ಯುವಕ ಸಂಘ ಹಾಗೂ ರಂಗಲೋಕಿ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಸಹಯೋಗದಲ್ಲಿ ಇಂದಿನಿಂದ (ಫೆ.14 ರಿಂದ) ಫೆ.23ರ ವರೆಗೆ ಹತ್ತು ದಿನಗಳವರೆಗೆ ಹೂವಿನಹಡಗಲಿ ಮತ್ತು ಹರಪ್ಪನಹಳ್ಳಿ ತಾಲ್ಲೂಕಿನ 20 ಗ್ರಾಮಗಳಲ್ಲಿ ನಡೆಯುಲಿದ್ದು, ಕಲಾವಿದರು ಆಯಾ ಗ್ರಾಮದ ಜನ ಸಂದನಿ ಸ್ಥಳದಲ್ಲಿ ಬೀದಿನಾಟಕ ಮತ್ತು ಜನಪದ ಸಂಗೀತ ಕಾರ್ಯಕ್ರಮಗಳ ಮೂಲಕ ಯೋಜನೆಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವರು.

HAMPI TIMES VIJAYANAGARA
ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ




ನಿಮ್ಮ ಹಂಪಿ ಪ್ರವಾಸ ಅನುಭವ

ನೀವು ಹಂಪಿಗೆ ಭೇಟಿ ನೀಡಿದ್ದೀರಾ? ಈ ಹಿಂದೆ ಹಂಪಿ ಹೇಗಿತ್ತು, ಈಗ ಹೇಗಾಗಿದೆ, ಮುಂದೆ ಏನೆಲ್ಲಾ ಸೌಲಭ್ಯಗಳು ಪ್ರವಾಸಿಗರಾಗಿ ನೀವು ನಿರೀಕ್ಷಿಸುತ್ತೀರಿ?
ನಿಮ್ಮದೆ ಅಭಿಪ್ರಾಯಗಳನ್ನು ಕಳುಹಿಸಿ, ಹಂಪಿ ಟೈಮ್ಸ್ ಮೂಲಕ ಸಂಬಂಧಿಸಿದ ಅಧಿಕಾರಿಗಳ ಗಮನ ಸೆಳೆಯಿರಿ.

ಹಂಪಿ ಪ್ರವಾಸೋದ್ಯಮ ಅಭಿವೃದ್ಧಿಗೆ ನಿಮ್ಮ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡುವುದರೊಂದಿಗೆ ಪ್ರವಾಸೋದ್ಯಮ ಪ್ರಗತಿಗೆ ಸಹಕರಿಸಿ.
ನಿಮ್ಮ ಅಭಿಪ್ರಾಯದೊಂದಿಗೆ ಹಂಪಿಗೆ ಭೇಟಿ ನೀಡಿದ ಕ್ಷಣದ ನಿಮ್ಮ ಫೋಟೊ ಇರಲಿ. ನಿಮ್ಮ ಅಭಿಪ್ರಾಯಗಳನ್ನು ಈ ಕೆಳಗಿನ ಇ-ಮೇಲ್/ ವಾಟ್ಸಪ್‌ಗೆ ಕಳುಹಿಸಿರಿ.

www.hampitimes.com
epaper.hampitimes.com
hampitimes@gmail.com
@hampitimes



9448633038

Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA